# ನಮ್ಮ ಜನ NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 132 | Volume - 01 Issue - 132
ಶೀರ್ಷಿಕೆ ಕೋಡ್: ಕೆಆರ್ ಕೆಎಎನ್ 28269 | Title- Code: KARKAN 28269
ಚಿತ್ರದುರ್ಗ | Chitradurga
ದಿನಾಂಕ: 06–12–2023 ಬುಧವಾರ | Date: 06-12-2023 Wednesday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00



ಒಳಪುಟದ ಸುದ್ದಿಗಳು
ವಿಶ್ವ ಶಾಂತಿಗಾಗಿ ಪುನೀತ್ ಅಭಿಮಾನಿಯಿಂದ ಸೈಕಲ್ ಯಾತ್ರೆ 2
ಮದಕರಿ ಬಳಗದಿಂದ ಅರ್ಜುನನಿಗೆ ಶ್ರದ್ಧಾಂಜಲಿ 3
ಮಾದಕ ವಸ್ತು ಮಾರಾಟ ಮಾಡದಂತೆ ಔಷಧಿ ಅಂಗಡಿ ಮಾಲೀಕರಿಗೆ ಎಚ್ಚರಿಕೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಹೆಚ್.ಎ.ಎಲ್: ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಹೆಚ್.ಎ.ಎಲ್ (ಹಿಂದೂಸ್ಥಾನ್ ಏರೋನಾಟಿಕ್ಸ್ ಲಿಮಿಟೆಡ್)ಯಲ್ಲಿ ಫಿಟ್ಟರ್, ಟರ್ನರ್, ಮೆಷಿನಿಷ್ಟ್, ವೆಲ್ಡರ್, ಛಿಂಂಛಿ, ಫೌಂಡ್ರಿ–ಮ್ಯಾನ್, ಶೀಟ್ ಮೆಟಲ್ ವರ್ಕರ್, ಕಾರ್ಪೆಂಟರ್, ಮೆಕ್ಯಾನಿಕ್ ಖಿ&ಂಆ ಟೂಲ್ ಮತ್ತು ಡೈ ಮೇಕರ್ ಮತ್ತು ಅಡ್ವಾನ್ಸ್ಡ್ ಅಓಅ ಮೆಷಿನಿಂಗ್ ಟ್ರೇಡಗಳಿಗೆ ಅಪ್ರೆಂಟಿಸ್ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ಡಿ.30 ಆಗಿರುತ್ತದೆ. ಕರ್ನಾಟಕ ರಾಜ್ಯದ ಮಾನ್ಯತೆ ಪಡೆದ ಐಟಿಐಗಳಿಂದ ಕ್ರಾಫ್ಟ್‌ಮೆನ್ ಟ್ರೈನಿಂಗ್ ಸ್ಕೀಮ್ ಸಿಟಿಎಸ್ ನಲ್ಲಿ ಉತ್ತೀರ್ಣರಾಗಿರಬೇಕು, ಎಸ್.ಎಸ್.ಎಲ್.ಸಿ. ಅಂಕಪಟ್ಟಿ, ಐ.ಟಿ.ಐ ಪ್ರಮಾಣ ಪತ್ರ ನಕಲು, ಎನ್.ಟಿ.ಸಿ ಯ ನಕಲು (ನ್ಯಾಷನಲ್ ಟ್ರೇಡ್ ಸರ್ಟಿಫಿಕೇಟ್), ಜಾತಿ ಪ್ರಮಾಣ ಪತ್ರ, ಅಂಗವಿಕಲರ ಪ್ರಮಾಣ ಪತ್ರ, ಮಾಜಿ ಸೈನಿಕ ಅವಲಂಬಿತ ಪ್ರಮಾಣ ಪತ್ರದ ಪ್ರತಿ, ಆಧಾರ್ ಕಾರ್ಡ್ ಮತ್ತು ಪಾನ್ ಕಾರ್ಡ್, ಇ–ಪಾನ್ ಪ್ರತಿ, www.apprenticeshipindia.org/candidate-registration ಪೋರ್ಟಲ್‌ನಲ್ಲಿ ನೋಂದಣಿ ಮಾಡಿರುವ ಪ್ರತಿ ತರಬೇಕು.ಅರ್ಜಿ ಸಲ್ಲಿಸಲು ನಗರದ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೋದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಉದ್ಯೋಗವಿನಿಮಯಕಚೇರಿಯನ್ನುಹಾಗೂ ದೂ. 9945587060 ಗೆ ಸಂಪರ್ಕಿಸಬಹುದು.

### ಪ್ರಬಂಧ ಸ್ಪರ್ಧೆ: ಫಲಿತಾಂಶ

» ಚಿತ್ರದುರ್ಗ

ಚಿತ್ರದುರ್ಗ ಪ್ರಾದೇಶಿಕ ಸಾರಿಗೆ ಕಚೇರಿ ವತಿಯಿಂದ ವಾಯು ಮಾಲಿನ್ಯ ನಿಯಂತ್ರಣ ಮಾಸ ನವೆಂಬರ್–2023ರ ಪ್ರಯುಕ್ತ ಶಾಲಾ ಮಕ್ಕಳಿಗೆ ಪ್ರಬಂಧ ಮತ್ತು ಚಿತ್ರಬಿಡಿಸುವ ಸ್ಪರ್ಧೆಗಳನ್ನು ನಡೆಸಿದ್ದು. ಪ್ರಬಂಧ ಸ್ಪರ್ಧೆ ವಿಜೇತರ ವಿವರ: ವಾಸವಿ ಕನ್ನಡ ಮಾಧ್ಯಮ ಪ್ರೌಢಶಾಲೆಯ 9ನೇ ತರಗತಿ ವಿದ್ಯಾರ್ಥಿನಿ ದೀಕ್ಷಾ–ಪ್ರಥಮ ಸ್ಥಾನ, ವಾಸವಿ ಇಂಗ್ಲೀಷ್ ಮಾಧ್ಯಮ ಪ್ರೌಢಶಾಲೆ 08 ನೇ ತರಗತಿ ವಿದ್ಯಾರ್ಥಿ ಓಂ ಕೆ.ಆರ್.–ದ್ವಿತೀಯ, ವಾಸವಿ ಕನ್ನಡ ಮಾಧ್ಯಮ ಪ್ರೌಢಶಾಲೆ 8 ನೇ ತರಗತಿ ವಿದ್ಯಾರ್ಥಿನಿ ಕೆ.ಕವನ–ತೃತೀಯ 01, ವಿದ್ಯಾ ವಿಕಾಸ ವಿದ್ಯಾ ಸಂಸ್ಥೆ ಶಾಲೆ ವಿದ್ಯಾರ್ಥಿ ಕೆ.ಇಂದು ತೃತೀಯ 2ನೇ ಸ್ಥಾನ, ಸಂತ ಜೋಸೆಪರ ಕಾನ್ವೆಂಟ್ ಕನ್ನಡ ಮಾಧ್ಯಮ ಪ್ರೌಢಶಾಲೆ ವಿದ್ಯಾರ್ಥಿ ಎಮ್.ಪುಣ್ಯ ಸಮಾದಾನಕರ ಬಹುಮಾನ ಗಳಿಸಿದ್ದಾರೆ.ಚಿತ್ರ ಬಿಡಿಸುವ ಸ್ಪರ್ಧೆ ವಿಜೇತರ ವಿವರ : ಪ್ರಾಥಮಿಕ ವಿಭಾಗದಲ್ಲಿ ವಾಸವಿ ವಿದ್ಯಾ ಸಂಸ್ಥೆಯ 7ನೇ ತರಗತಿ ವಿದ್ಯಾರ್ಥಿ ಲಿಖಿತಾ ಎಲ್. ನಾಯ್ಡ ಪ್ರಥಮ ಸ್ಥಾನ, ಎಸ್.ಜೆ.ಎಂ ಶಾಲೆಯ 6ನೇ ತರಗತಿ ವಿದ್ಯಾರ್ಥಿನಿ ಕೆ.ಎಂ.ಸಮನ್ವಿತಾ ದ್ವಿತೀಯ ಸ್ಥಾನ, ವಿದ್ಯಾ ವಿಕಾಸ ವಿದ್ಯಾ ಸಂಸ್ಥೆಯ 7 ನೇ ತರಗತಿ ವಿದ್ಯಾರ್ಥಿ ಎಂ.ವೈ. ಭಾವಿನ್ ತೃತೀಯ ಸ್ಥಾನ, ಡಾನ್ ಬಾಸ್ಕೋ ಶಾಲೆಯ 6ನೇ ತರಗತಿ ವಿದ್ಯಾರ್ಥಿನಿ ಆರ್.ದೀಪಿಕಾ ತೃತೀಯ 2ನೇ ಸ್ಥಾನ, ವಾಸವಿ ವಿದ್ಯಾ ಸಂಸ್ಥೆಯ 7ನೇ ತರಗತಿ ವಿದ್ಯಾರ್ಥಿ ಎಸ್.ವಿನಿತ್ ಚಂದ್ರ ಸಮಾಧಾನಕರ ಬಹುಮಾನ ಗಳಿಸಿದ್ದಾರೆ.ಪ್ರೌಢ ವಿಭಾಗದಲ್ಲಿ ಎಸ್.ಜೆ.ಎಂ. ಆರ್, ಸಿ.ಬಿ.ಎಸ್.ಇ ಸ್ಕೂಲ್ ಎಂ.ಕೆ.ಹಟ್ಟಿಯ 10ನೇ ತರಗತಿ ವಿದ್ಯಾರ್ಥಿನಿ ಎಸ್.ಬಿ.ಶ್ರಾವಣಿ ಪ್ರಥಮ ಸ್ಥಾನ, ಸೆಂಟ್ ಜೋಸೆಫ್ ಕಾನ್ವೆಂಟ್ ಹೈ ಸ್ಕೂಲ್ ಬಿ ವಿಭಾಗದ 9ನೇ ತರಗತಿ ವಿದ್ಯಾರ್ಥಿನಿ ಕೆ.ಆರ್.ಸುಮ ದ್ವಿತೀಯ ಸ್ಥಾನ, ವಿದ್ಯಾ ವಿಕಾಸ ಸಂಸ್ಥೆಯ ಎ.ವಿಭಾಗದ 8ನೇ ತರಗತಿ ವಿದ್ಯಾರ್ಥಿ ಎಸ್.ಕೆ.ಸಾಂಪ್ರತ ತೃತೀಯ ಸ್ಥಾನ, ಎಸ್.ವಿ.ವಿಎಸ್. ಶಾಲೆ ಬಿ ವಿಬಾಗದ 9ನೇ ತರಗತಿ ವಿದ್ಯಾರ್ಥಿನಿ ಪ್ರತೀಕಾ ತೃತೀಯ 2ನೇ ಸ್ಥಾನ, ಎಸ್.ಜೆ.ಎಂ. ಆರ್ ಶಾಲೆ 9ನೇ ತಗರತಿ ವಿದ್ಯಾರ್ಥಿನಿ ಸಿ.ಭಾರತಿ ಸಮಾಧಾನಕರ ಬಹುಮಾನ ಗಳಿಸಿದ್ದಾರೆ.

### ಟ್ಯಾಕ್ಟರ್ ಪಲ್ಟಿ ಸ್ಥಳದಲ್ಲೇ ಚಾಲಕ ಸಾವು

» ಹೊಸದುರ್ಗ

ಟ್ಯಾಕ್ಟರ್ ಚಲಾಯಿಸಿಕೊಂಡು ಬರುತಿದ್ದ ಸಂಧರ್ಬದಲ್ಲಿ ಟ್ಯಾಕ್ಟರ್ ಪಲ್ಟಿಯಾದ ಪರಿಣಾಮ ಟಾಕ್ಟರ್ ಚಾಲಕ ಸ್ಥಳದಲ್ಲೆ ಸಾವನ್ನಪ್ಪಿರುವ ಘಟನೆ ತಾಲೂಕಿನ ರಂಗಯ್ಯನೂರು ಸಮೀಪ ಸಂಭವಿಸಿದೆ. ಮೃತನನ್ನು ಮೂಲತಹ ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ ತಾಲೂಕು ತುಪ್ಪದಹಳ್ಳಿ ಗ್ರಾಮದ ವೆಂಕಟೇಶಪ್ಪ ಎಂಬುವವರ ಪುತ್ರ ಶಿವಣ್ಣ (55) ಎಂದು ತಿಳಿದು ಬಂದಿದ್ದುರಂಗಯ್ಯನೂರು ಗ್ರಾಮದ ಸಮೀಪವಿರುವ ತೋಟವೊಂದರಲ್ಲಿ ತೆಂಗಿನ ಕಾಯಿ ತುಂಬಿಕೊಂಡು ಹೋಗುತಿದ್ದ ಸಂಧರ್ಬದಲ್ಲಿ ಎಕಾ ಎಕಿ ಟ್ಯಾಕ್ಟರ್ ಪಲ್ಟಿಯಾದ ಪರಿಣಾಮ ಚಾಲನ ಸ್ಥಳದಲ್ಲೆ ಸಾವನ್ನಪ್ಪದ್ದಾನೆ.

### ನವಭಾರತ ಸಾಕ್ಷರತಾ ಕಾರ್ಯಕ್ರಮ ಅನುಷ್ಠಾನ

# ಅನಕ್ಷರಸ್ಥರನ್ನು ಸಾಕ್ಷರರನ್ನಾಗಿಸಲು ಯೋಜನಾ ಬದ್ಧ ಕಾರ್ಯಕ್ರಮ ರೂಪಿಸಿ: ಡಿಸಿ ದಿವ್ಯಪ್ರಭು

» ಚಿತ್ರದುರ್ಗ

ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಹಯೋಗದಲ್ಲಿ 15 ವರ್ಷ ಮೇಲ್ಪಟ್ಟ ಅನಕ್ಷರಸ್ಥರನ್ನು ಸಾಕ್ಷರರನ್ನಾಗಿಸಲು "ನವ ಭಾರತ" ಸಾಕ್ಷರತಾ ಕಾರ್ಯಕ್ರಮ ಅನುಷ್ಠಾನಗೊಳಿಸಲಾಗುತ್ತಿದ್ದು, ಯೋಜನೆಯನ್ನು ಯಶಸ್ವಿಗೊಳಿಸಲು ಯೊಜನಾಬದ್ಧ ಕಾರ್ಯತಂತ್ರ ರೂಪಿಸುವಂತೆ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.



ನವಭಾರತ ಸಾಕ್ಷರತಾ ಕಾರ್ಯಕ್ರಮ ಆಯೋಜನೆ ಸಂಬಂಧ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಲಾದ ಜಿಲ್ಲಾ ಕಾರ್ಯಪಡೆ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಹಯೋಗದಲ್ಲಿ ಜಿಲ್ಲೆಯಲ್ಲಿರುವ 15 ವರ್ಷ ಮೇಲ್ಪಟ್ಟ ಅನಕ್ಷರಸ್ಥರನ್ನು ಗುರುತಿಸಿ, ಅಂತಹವರಿಗೆ ಸಾಕ್ಷರಸ್ಥರನ್ನಾಗಿಸುವುದು ನವಭಾರತ ಸಾಕ್ಷರತಾ ಕಾರ್ಯಕ್ರಮದ ಉದ್ದೇಶವಾಗಿದೆ. ಇದಕ್ಕಾಗಿ ಅಂಡರ್‌ಸ್ಟಾಂಡಿಂಗ್ ಲೈಫ್‌ಲಾಂಗ್ ಲರ್ನಿಂಗ್ ಫಾರ್ ಆಲ್ ಸೊಸೈಟೀಸ್ (ಗಖಿಐಂಖ) ಆಪ್, ಅನಕ್ಷರಸ್ಥರ ಸಮೀಕ್ಷೆ, ಬೋಧನೆ, ಕಲಿಕಾ ಸಾಮಗ್ರಿಗಳ ಹಂಚಿಕೆ, ಸಮುದಾಯದಲ್ಲಿ ಸಂಚಲನ ಮತ್ತು ಸಾಮಾಜಿಕ ಚೇತನ ಕೇಂದ್ರಗಳು, ಮೌಲ್ಯಮಾಪನ ಹಾಗೂ ಪ್ರಮಾಣೀಕರಿಸುವ ಚಟುವಟಿಕೆಗಳನ್ನು ರೂಪಿಸಲು ಜಿಲ್ಲಾ, ತಾಲ್ಲೂಕು, ಗ್ರಾಮ ಮಟ್ಟದಲ್ಲಿ ಕಾರ್ಯಪಡೆಗಳನ್ನು ರಚಿಸಲಾಗಿದೆ. ಈಗಾಗಲೆ ಜಿಲ್ಲಾ ಹಂತದ ಸಂಪನ್ಮೂಲ ವ್ಯಕ್ತಿಗಳಿಗೆ ತರಬೇತಿ ನೀಡಿದ್ದು, ಈ ತಂಡವನ್ನು ಸಕ್ರಿಯವಾಗಿ ತೊಡಗಿಸಿ, ಕಾರ್ಯಕ್ರಮ ಯಶಸ್ವಿಗೊಳಿಸಬೇಕಿದೆ. ರಾಜ್ಯದಲ್ಲಿ ಹಾಗೂ ನಮ್ಮ ಜಿಲ್ಲೆಯಲ್ಲಿ ಉಲ್ಲಾಸ್ ಕಾರ್ಯಕ್ರಮದ ಮೂಲಕ ಶೇ. 100 ರಷ್ಟು ಸಾಕ್ಷರತೆಯನ್ನು ಖಚಿತಪಡಿಸಿಕೊಳ್ಳುವುದು ಕೂಡ ಯೋಜನೆ ಉದ್ದೇಶವಾಗಿದೆ ಎಂದರು. ಜಿಲ್ಲೆಯ ಅನಕ್ಷರರನ್ನು ಸಾಕ್ಷರರನ್ನಾಗಿಸಲು ಜಿಲ್ಲೆಯ ಪ್ರತಿಯೊಂದು ಪದವಿ ಕಾಲೇಜಿಗೆ ಭೇಟಿ ನೀಡಿ, ಉಲ್ಲಾಸ್–ನವಭಾರತ ಸಾಕ್ಷರತಾ ಕಾರ್ಯಕ್ರಮದ ಕುರಿತು ಪಿಪಿಟಿ ಮೂಲಕ ಮಾಹಿತಿ ನೀಡಿ, ನಂತರ ಈ ಕಾರ್ಯಕ್ರಮಕ್ಕೆ ಆಸಕ್ತಿ, ತಾಳ್ಮೆ ಇರುವ ಸ್ವಯಂ ಸೇವಕ ಬೋಧಕರ ವಿದ್ಯಾರ್ಥಿಗಳ ಪಟ್ಟಿ ಸಿದ್ಧಪಡಿಸಿಕೊಳ್ಳಬೇಕು ಎಂದು ತಾಕೀತು ಮಾಡಿದರು. ಗ್ರಾಮಗಳಲ್ಲಿ ಸೇವಾ ಮನೋಭಾವ ಹೊಂದಿರುವ ವಿದ್ಯಾವಂತರು, ಎನ್‌ಸಿಸಿ, ಎನ್‌ಎಸ್‌ಎಸ್, ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಪ್ರತಿನಿಧಿಗಳು ಹಾಗೂ ಆಶಾ, ಅಂಗನವಾಡಿ ಕಾರ್ಯಕರ್ತೆಯರನ್ನು ಸ್ವಯಂ ಸೇವಕ ಬೋಧಕರನ್ನಾಗಿ ನಿಯೋಜಿಸಿಕೊಂಡು ನವ ಭಾರತ ಸಾಕ್ಷರತಾ ಕಾರ್ಯಕ್ರಮ ಯಶಸ್ವಿಗೊಳಿಸಬೇಕು, ಮಹಿಳಾ ಸ್ವ ಸಹಾಯ ಗುಂಪುಗಳಲ್ಲಿನ ಅನಕ್ಷರಸ್ಥರನ್ನು ಸಾಕ್ಷರರನ್ನಾಗಿಸಲು ಯತ್ನಿಸಬೇಕು ಎಂದು ಸೂಚನೆ ನೀಡಿದರು.

ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿ ಮಂಜುಳಾ ಮಾತನಾಡಿ, ನವ ಭಾರತ ಸಾಕ್ಷರತಾ ಕಾರ್ಯಕ್ರಮ ಕೇಂದ್ರ ಪುರಸ್ಕೃತ ಯೋಜನೆಯಾಗಿದೆ. ಕೇಂದ್ರದಿಂದ ಶೇ.60ರಷ್ಟು ಹಾಗೂ ರಾಜ್ಯದಿಂದ ಶೇ.40ರಷ್ಟು ಅನುದಾನ ಬಿಡುಗಡೆಯಾಗಲಿದೆ. ಈ ಯೋಜನೆ ಅನುಷ್ಠಾನಕ್ಕೆ ಜಿಲ್ಲಾಮಟ್ಟ, ತಾಲ್ಲೂಕು ಮಟ್ಟ ಹಾಗೂ ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಕಾರ್ಯಪಡೆ ರಚನೆ ಮಾಡಿ ನಂತರ 15 ವರ್ಷ ಮೇಲ್ಪಟ್ಟ ಅನಕ್ಷರಸ್ಥರನ್ನು ಸಮೀಕ್ಷೆ ಮಾಡಿ, ಅವರನ್ನು ಸಾಕ್ಷರರನ್ನಾಗಿ ಮಾಡಲಾಗುವುದು ಎಂದರು.

ಜಿಲ್ಲೆಯ ಆಯ್ದ 27 ಗ್ರಾಮ ಪಂಚಾಯಿತಿಗಳಲ್ಲಿ ಶಿಕ್ಷಕರು "ಉಲ್ಲಾಸ್" ಆ್ಯಪ್ ಮೂಲಕ ಅನಕ್ಷರಸ್ಥರ ಸರ್ವೆ ಪ್ರಗತಿಯಲ್ಲಿದ್ದು, ಇಲ್ಲಿಯವರೆಗೆ ಜಿಲ್ಲೆಯಲ್ಲಿ 25,777 ಅನಕ್ಷರಸ್ಥರನ್ನು ಈಗಾಗಲೆ ಗುರುತಿಸಲಾಗಿದೆ. 2022–2027 ರವರೆಗೆ ಕರ್ನಾಟಕದಲ್ಲಿ ಉಲ್ಲಾಸ್ ಕಾರ್ಯಕ್ರಮದ ಮೂಲಕ ಶೇ.100ರಷ್ಟು ಪ್ರಗತಿ ಸಾಧಿಸಲು ಯೋಜನೆ ರೂಪಿಸಲಾಗಿದೆ. ಜಿಲ್ಲೆಯಲ್ಲಿ 2022 ರಿಂದ 2027 ರವರೆಗೆ ಪ್ರತಿ ವರ್ಷ 41250 ಗುರಿಯನ್ನು ಸಾಧಿಸುವ ಉದ್ದೇಶ ಹೊಂದಲಾಗಿದೆ. 2027ರೊಳಗಾಗಿ ರಾಜ್ಯದಲ್ಲಿ ಶೇ.100ರಷ್ಟು ಸಾಕ್ಷರತೆಯ ಮಹತ್ವಾಕಾಂಕ್ಷೆಯ ಗುರಿ ಸಾಧಿಸುವುದಾಗಿದೆ. ವಯಸ್ಕರ ಶಿಕ್ಷಣ ಎಂಬುವುದು ಪ್ರಸ್ತುತ ಸರ್ವರಿಗೂ ಶಿಕ್ಷಣ ಎಂದು ಬದಲಾಗಿದೆ ಎಂದು ಹೇಳಿದರು. ಇದೇ ಸಂದರ್ಭದಲ್ಲಿ ನವಭಾರತ ಸಾಕ್ಷರತಾ ಕಾರ್ಯಕ್ರಮದ ಕುರಿತ ಪೋಸ್ಟರ್‌ನ್ನು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಬಿಡುಗಡೆ ಮಾಡಿದರು.ಸಭೆಯಲ್ಲಿ ಜಿಲ್ಲಾ ಕಾರ್ಯಪಡೆ ಸಮಿತಿ ಸದಸ್ಯರುಗಳಾದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಕಾರ್ಮಿಕ ಅಧಿಕಾರಿ ಇಬ್ರಾಹಿಂ, ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

## ಸುಸ್ಥಿರ ಜೀವನಕ್ಕಾಗಿ ಜೀವವೈವಿಧ್ಯತೆ ಜ್ಞಾನ ಅತ್ಯಗತ್ಯ

» ಚಿತ್ರದುರ್ಗ

ಸುಸ್ಥಿರ ಜೀವನೋಪಾಯಕ್ಕಾಗಿ ಜೀವವೈವಿಧ್ಯತೆಯ ಉತ್ತಮ ಜ್ಞಾನವನ್ನು ಹೊಂದಿರುವುದು ಬಹಳ ಮುಖ್ಯ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಹೇಳಿದರು.




ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಮಂಗಳವಾರ ರಾಜ್ಯ ಔಷಧಿ ಗಿಡಮೂಲಿಕೆ ಪ್ರಾಧಿಕಾರ ಮತ್ತು ಕರ್ನಾಟಕ ಜೀವವೈವಿಧ್ಯ ಮಂಡಳಿ, ಚಿತ್ರದುರ್ಗ ಅರಣ್ಯ ವಿಭಾಗ ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಔಷಧಿ ಸಸ್ಯ ಹಾಗೂ ಜೀವವೈವಿಧ್ಯದ ಕುರಿತು ವಿಭಾಗ ಮಟ್ಟದ ಅರಣ್ಯ ಅಧಿಕಾರಿಗಳ ಮತ್ತು ಮುಂಚೂಣಿ ಸಿಬ್ಬಂದಿಯ ಸಾಮರ್ಥ್ಯ ವರ್ಧನೆ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಜೀವವೈವಿಧ್ಯವು ಭೂಮಿಯ ಮೇಲಿನ ಜೀವನದ ಶ್ರೀಮಂತಿಕೆ ಮತ್ತು ವೈವಿಧ್ಯತೆ ವಿವರಿಸುತ್ತದೆ. ಇದು ನಮ್ಮ ಗ್ರಹದ ಅತ್ಯಂತ ಸಂಕೀರ್ಣ ಮತ್ತು ಪ್ರಮುಖ ಲಕ್ಷಣವಾಗಿದೆ. ಜೀವವೈವಿಧ್ಯವಿಲ್ಲದೇ ಜೀವನ ಉಳಿಯುವುದಿಲ್ಲ. ಜೀವವೈವಿಧ್ಯವು ಪರಿಸರ ಮತ್ತು ಆರ್ಥಿಕ ಮಹತ್ವವನ್ನು ಹೊಂದಿದೆ. ಇದು ನಮಗೆ ಪೋಷಣೆ, ವಸತಿ, ಇಂಧನ, ಬಟ್ಟೆ ಮತ್ತು ಹಲವಾರು ಇತರ ಸಂಪನ್ಮೂಲಗಳನ್ನು ಒದಗಿಸುತ್ತದೆ. ಇದು ಪ್ರವಾಸೋದ್ಯಮದ ಮೂಲಕ ವಿತ್ತೀಯ ಪ್ರಯೋಜನಗಳನ್ನು ಹೊರತೆಗೆಯುತ್ತದೆ ಎಂದು ತಿಳಿಸಿದ ಅವರು, ಚಿತ್ರದುರ್ಗ ಜಿಲ್ಲೆಯು ಜೀವವೈವಿಧ್ಯತೆ ಹೊಂದಿದೆ. ಹಲವಾರು ಔಷಧಿಯ ಸಸ್ಯಗಳು, ಕುರುಚಲು ಸಸ್ಯವರ್ಗ, ದಟ್ಟ ಅರಣ್ಯ ಇವೆ. ಇವೆಲ್ಲವನ್ನೂ ಸಂರಕ್ಷಿಸುವ ಕೆಲಸ ಆಗಬೇಕು ಎಂದು ತಿಳಿಸಿದರು.

ಉಪ ಅರಣ್ಯ ಸಂರಕ್ಷಣಾಧಿಕಾರಿ ಟಿ.ರಾಜಣ್ಣ ಮಾತನಾಡಿ, ಜೀವವೈವಿಧ್ಯತೆ ಸಂರಕ್ಷಿಸುವ ಅಗತ್ಯತೆ ಕುರಿತು ಕರೆ ನೀಡಿದರು. ಸಾಮಾಜಿಕ ಅರಣ್ಯ ಉಪ ಅರಣ್ಯ ಸಂರಕ್ಷಣಾಧಿಕಾರಿ ಹರೀಶ್ ಮಾತನಾಡಿ, ಹಲವಾರು ಔಷಧಿಯ ಸಸ್ಯಗಳು ಅಳಿವಿನಂಚಿಗೆ ತಲುಪಿದ್ದು, ಅವುಗಳನ್ನು ಉಳಿಸುವ ಪ್ರಯತ್ನ ಮಾಡಬೇಕು ಎಂದರು. ಆಯುಷ್ ವೈದ್ಯಾಧಿಕಾರಿ ಡಾ.ಟಿ.ಶಿವಕುಮಾರ್ ಅವರು ಜೋಗಿಮಟ್ಟಿ ಅರಣ್ಯದಲ್ಲಿ ಬರುವ ಔಷಧಿಯ ಸಸ್ಯಗಳ ಪರಿಚಯ ಮಾಡಿಕೊಟ್ಟರು. ಸಂಪನ್ಮೂಲ ವ್ಯಕ್ತಿ ಡಾ.ನಿರಂಜನ್ ಅವರು, ಆಡುಮಲ್ಲೇಶ್ವರ ಸ್ಥಳಕ್ಕೆ ಭೇಟಿ ನೀಡಿ, ಆಡುಮಲ್ಲೇಶ್ವರ ಸ್ಥಳದ ಸುತ್ತಮುತ್ತಲಿರುವ ಔಷಧಿಯ ಸಸ್ಯಗಳ ಪ್ರಾತ್ಯಕ್ಷಿಕೆ ನೀಡಿದರು.

## ಕರಾಟೆ ಚಾಂಪಿಯನ್ ಶಿಪ್: ರಾಷ್ಟ್ರ ಮಟ್ಟದ ಸ್ಪರ್ಧೆಯಲ್ಲಿ ಗೆದ್ದು ಬೀಗಿದ ತಾಲೂಕಿನ ವಿದ್ಯಾರ್ಥಿಗಳು



**ಮೊಳಕಾಲ್ಮುರು:** ರಾಷ್ಟ್ರೀಯ ಮಟ್ಟದ ಕರಾಟೆ ಚಾಂಪಿಯನ್ ಶಿಪ್ ನಲ್ಲಿ ತಾಲೂಕಿನ ರಾಂಪುರ ಗ್ರಾಮದ ಎಸ್ ಜಿ ಮಾಡೆಲ್ ಶಾಲೆಯ ವಿದ್ಯಾರ್ಥಿಗಳು ವಿಜೇತರಾಗುವ ಮೂಲಕ ಅಭೂತಪೂರ್ವ ಸಾಧನೆಗೆ ಸಾಕ್ಷಿಯಾಗಿದ್ದಾರೆ.ಎಸ್‌ಜಿ ಮಾಡಲ್ ಶಾಲೆಯ ವಿದ್ಯಾರ್ಥಿಗಳಾದ ಪ್ರತೀಕ್,ವಿಕಾಸ್ ಮತ್ತು ಮಣಿಕಂಠ ಜಿಲ್ಲಾಮಟ್ಟದ ಕರಾಟೆ ಸ್ಪರ್ಧೆಯಲ್ಲಿ ಕರಾಟೆ ವಿಭಾಗದಲ್ಲಿನ ಕುಮಿಟೆಯಲ್ಲಿ ಪ್ರಥಮ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದರು.ಇನ್ನು ಇದೇ ಶಾಲೆಯ ಮಕ್ಕಳು ಬಳ್ಳಾರಿಯಲ್ಲಿ ನಡೆದ ನಾಲ್ಕನೇ ರಾಷ್ಟ್ರೀಯ ಮಟ್ಟದ ಕರಾಟೆ ಚಾಂಪಿಯನ್ ಶಿಪ್ ನಲ್ಲಿ ಕರಾಟೆಯ ವಿಭಾಗದ ಕಟಾ ಮತ್ತು ಕುಮಿಟೆ ವಿಭಾಗದಲ್ಲಿ ಪುನೀತ್ ಪ್ರಥಮ ಸ್ಥಾನವನ್ನು ಪಡೆದರೆ,ಕರಾಟೆ ವಿಭಾಗದ ಘಟನೆ ಮತ್ತು ಕುಮಿಟೆ ವಿಭಾಗದಲ್ಲಿ ಇದೆ ಶಾಲೆಯ ಸ್ಪಂದನ ದ್ವಿತೀಯ ಸ್ಥಾನ ಪಡೆಯುವ ಮೂಲಕ ತಾಲೂಕಿನ ಕೀರ್ತಿಯನ್ನು ಹೆಚ್ಚಿಸಿದ್ದಾರೆ.


## ಪ್ರಮುಖ ಸುದ್ದಿ

### ಪೌರಾಡಳಿತ ಸಚಿವ ರಹೀಂಖಾನ್‌ಗೆ ವಿಧಾನ ಪರಿಷತ್ ಸದಸ್ಯ ಕೆಎಸ್ ನವೀನ್ ಮನವಿ

# ಸ್ಥಳಿಯ ಸಂಸ್ಥೆಗಳ ಅಧ್ಯಕ್ಷ, ಉಪಾಧ್ಯಕ್ಷ ಮೀಸಲು ಪ್ರಕಟಿಸಿ

» ಚಿತ್ರದುರ್ಗ

ಇಂದು ಸುವರ್ಣ ವಿಧಾನಸೌಧ ಬೆಳಗಾವಿಯಲ್ಲಿ ವಿಧಾನ ಪರಿಷತ್ ಶಾಸಕರಾದ ಕೆಎಸ್ ನವೀನ್ ರವರು ಪೌರಾಡಳಿತ ಸಚಿವರಾದ ರಹೀಂಖಾನ್‌ರವರನ್ನು ಹಾಗೂ ನಗರಾಭಿವೃದ್ಧಿ ಇಲಾಖೆ ಕಾರ್ಯದರ್ಶಿಗಳಾದ ಅಜಯ್ ನಾಗಭೂಷಣ್ ರವರನ್ನು ಭೇಟಿ ಮಾಡಿ ಸದರಿ ವಿಷಯದ ಗಂಭೀರತೆ ಕುರಿತು ಶೀಘ್ರವಾಗಿ ಮುಖ್ಯಮಂತ್ರಿಗಳೊಡನೆ ಚರ್ಚಿಸಿ ಕೂಡಲೇ ಸ್ಥಳೀಯ ಸಂಸ್ಥೆಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಮೀಸಲು ಪಟ್ಟಿಯನ್ನು ಪ್ರಕಟಿಸಬೇಕೆಂದು ವಿನಂತಿಸಿಕೊಂಡರು.



ರಾಜ್ಯದಲ್ಲಿ ಸುಮಾರು ನೂರಕ್ಕೂ ಹೆಚ್ಚು ಸ್ಥಳೀಯ ಸಂಸ್ಥೆಗಳ ಮೊದಲ ಅವಧಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಆಡಳಿತ ಅವಧಿ ಮುಕ್ತಾಯವಾಗಿ ಹಲವು ತಿಂಗಳು ಕಳೆದರು ಇದುವರೆಗೂ ಮೀಸಲು ಪ್ರಕಟಗೊಳಿಸಿಲ್ಲದಿರುವುದರಿಂದ ಚುನಾಯಿತ ಪ್ರತಿನಿಧಿಗಳ ಹಕ್ಕು ಮೊಟಕುಗೊಳಿಸಿದಂತಾಗುತ್ತದೆ. ಸ್ಥಳೀಯ ಆಡಳಿತದ ಮೀಸಲು ಕುರಿತ ನಿರ್ಲಕ್ಷ ವಿಳಂಬ ಪರಿಣಾಮ ಅವಧಿ ಮುಗಿದು ಹಲವು ವರ್ಷಗಳಾದರೂ ತಾಲೂಕು ಪಂಚಾಯಿತಿ ಮತ್ತು ಜಿಲ್ಲಾ ಪಂಚಾಯಿತಿ ಚುನಾವಣೆ ನಡೆದಿಲ್ಲದಿರುವುದರ ಕಾರಣ ಶೀಘ್ರವಾಗಿ ಮುಖ್ಯಮಂತ್ರಿಗಳೊಡನೆ ಚರ್ಚಿಸಿ ಕೂಡಲೇ ಸ್ಥಳೀಯ ಸಂಸ್ಥೆಯ ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಮೀಸಲು ಪಟ್ಟಿಯನ್ನು ಪ್ರಕಟಿಸಬೇಕೆಂದು ವಿನಂತಿಸಿಕೊಂಡರು.

ಈ ಸಂದರ್ಭದಲ್ಲಿ ಸ್ಥಳೀಯ ಸಂಸ್ಥೆಯಿಂದ ಆಯ್ಕೆಯಾದ ವಿಧಾನ ಪರಿಷತ್ ಶಾಸಕರಾದ ಸುಜಾ ಕುಶಾಲಪ್ಪ, ಆ.ಖ.ಅರುಣ್ , ಪಿ.ಹೆಚ್.ಪೂಜಾರ್,ಪ್ರದೀಪ್ ಶೆಟ್ಟರ್ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತೆ

» ನಾಯಕನಹಟ್ಟಿ



ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುವುದು ಖಚಿತ ರಾಹುಲ್ ಗಾಂಧಿ ಪ್ರಧಾನಿಯಾಗುವುದು ನಿಶ್ಚಿತ ಎಂದು ಕಾಂಗ್ರೆಸ್ ಮುಖಂಡ ಹೊಸಹಳ್ಳಿ ತಿಪ್ಪೇಸ್ವಾಮಿ ಹೇಳಿದರು .ಪಟ್ಟಣದ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಕಳೆದ ರಾಜ್ಯ ವಿಧಾನಸಭಾ ಚುನಾವಣೆಯಲ್ಲಿ ನುಡಿದಂತೆ ಗ್ಯಾರಂಟಿಗಳನ್ನು ಹಿಡೇರಿಸಿದರು. ಈ ಹಿನ್ನಲೆಯಲ್ಲಿ ಮುಂದಿನ ಲೋಕಸಭಾ ಚುನಾವಣೆಯಲ್ಲಿ ಕರ್ನಾಟಕದಲ್ಲಿ ಕಾಂಗ್ರೆಸ್ ಅಲೆ ಇದೆ, ಯಾವುದೇ ಅನುಮಾನ ಇಲ್ಲ. ಅಲ್ಲದೆ ಲೋಕಸಭಾ ಚುನಾವಣೆಯಲ್ಲಿ ಇಡೀ ನಮ್ಮ ದೇಶದಲ್ಲಿ ಕಾಂಗ್ರೆಸ್ ಪರವಾದ ಅಲೆಯಿದೆ ಎಂದರು.ಕರ್ನಾಟಕದಲ್ಲಿ ತಮ್ಮ ಹಿಂದಿನ ಅಧಿಕಾರವ ಅವದಿಯಲ್ಲಿ ಸಿದ್ದರಾಮಯ್ಯನವರು ಜನಪರವಾಗಿ ಅನೇಕ ಭಾಗ್ಯಗಳನ್ನು ನೀಡಿದರು. ರಾಜ್ಯದ ಮುಖ್ಯಮಂತ್ರಿಯಾದ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಾಜ್ಯದ ಜನತೆಗೆ ಉತ್ತಮ ಆಡಳಿತ ನೀಡುತ್ತಿದ್ದಾರೆ ಎಂದು ಅವರು ಮಾತನಾಡಿದರು.ಛತ್ತಿಸ್‌ಗಡ, ಮಧ್ಯಪ್ರದೇಶ, ರಾಜಸ್ಥಾನ ಮೂರು ರಾಜ್ಯಗಳ ಸೋಲಿನಿಂದ ಕಾಂಗ್ರೆಸ್ ಯಾವತ್ತಿಗೂ ಕುಗ್ಗುವುದಿಲ್ಲ. ತೆಲಾಂಗಣದ ಗೆಲುವಿಗೆ ಇಗ್ಗುವುದಿಲ್ಲ. ಸೋಲಿನ ತಪ್ಪುಗಳನ್ನು ತಿದ್ದುಕೊಂಡು ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಮತದಾರರ ವಿಶ್ವಾಸಗಳಿಸಲು ಜನರ ಬಳಿಗೆ ಹೋಗುತ್ತೇವೆ ಎಂದು ಅವರು ಮಾತನಾಡಿದರು.

### ಮತ್ತೆ ಮೋದಿ ಪ್ರಧಾನಿ

» ನಾಯಕನಹಟ್ಟಿ



ಮುಂಬರು ಲೋಕಸಭಾ ಚುನಾವಣೆಯಲ್ಲಿ ಬಿಜೆಪಿ ಅಧಿಕಾರಕ್ಕೆಬರುವುದು ಖಚಿತ, ಮತ್ತೊಮ್ಮೆ ಮೋದಿಯವರು ಪ್ರಧಾನಿಯಾಗುವುದು ನಿಶ್ಚಿತ ಎಂದು ಬಿಜೆಪಿ ಮುಖಂಡ ಚೌಡಪ್ಪ ಭವಿಷ್ಯ ನುಡಿದರು. ಪಟ್ಟಣದಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮದ್ಯಪ್ರದೇಶ, ರಾಜಸ್ಥಾನ, ಛತ್ತಿಸ್‌ಗಡ ರಾಜ್ಯಗಳಲ್ಲಿ ಮತದಾರರು ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಪಾಠ ಕಲಿಸಿದ್ದಾರೆ. ಹಗಲು–ರಾತ್ರಿ ಎನ್ನದೆ ನಮ್ಮ ದೇಶಕ್ಕಾಗಿ ದುಡಿಯುತ್ತಿರುವ ಪ್ರಧಾನಿ ಮೋದಿಯವರ ನಾಯಕತ್ವದ ಮೇಲೆ ನಂಬಿಕೆಯಿಟ್ಟ ಮತದಾರರು ಬಿಜೆಪಿ ಪಕ್ಷಕ್ಕೆ ಸ್ಪಷ್ಟ ಬಹುಮತ ಮತದಾರರು ನೀಡಿದ್ದಾರೆ ಎಂದು ಕೃತಜ್ಞತೆ ಸಲ್ಲಿಸಿದರು. ದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ ನಾಯಕತ್ವ ಯಾರು ಸಾಟಿಯಿಲ್ಲ ಎಂಬುವುದು ಸಾಬೀತಾಗಿದೆ ಎಂದರು.ಎರಡು ಬಾರಿ ಪ್ರಧಾನಿಯಾಗಿ ವಿಶ್ವವೇ ಭಾರತದತ ತೀರುಗಿ ನೋಡುವಂತೆ ಮಾಡಿರುವ ಮೋದಿಯವರು ಹ್ಯಾಟ್ರಿಕ್ ಪ್ರಧಾನ ಮಂತ್ರಿಯಾಗಲಿದ್ದಾರೆ. ಈ ಕಾಂಗ್ರೆಸ್ ದುರಾಡಳಿತ ನೋಡಿ ರಾಜ್ಯದ ಜನತೆ ನೊಂದು ಹೋಗಿದ್ದಾರೆ. ಮುಂಬರು ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಪಾಠ ಕಲಿಸುತ್ತಾರೆ ಎಂದರು.

### ಕಬೀರಾನಂದ ಶ್ರೀಗಳು 67ನೇ, ಕಬೀರೇಶ್ವರ ಶ್ರೀ 57ನೇ ಪುಣ್ಯಾರಾಧನೆ



» ಚಿತ್ರದುರ್ಗ

ನಗರದ ಕಬೀರಾನಂದಾಶ್ರಮದವತಿಯಿಂದ ಶ್ರೀ ಸದ್ಗುರು ಕಬೀರಾನಂದ ಶ್ರೀಗಳು 67ನೇ ಹಾಗೂ ಶ್ರೀ ಸದ್ಗುರು ಕಬೀರೇಶ್ವರ ಶ್ರೀಗಳ 57ನೇ ಪುಣ್ಯಾರಾಧನೆ ಸಮಾರೋಪ ಸಮಾರಂಭವೂ ಡಿ. 6ನೇ ಬುಧವಾರ ಸಂಜೆ 7 ಗಂಟೆಗೆ ಶ್ರೀ ಸದ್ಗುರು ಕಬೀರಾನಂದಾಶ್ರಮ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಗಣಪತಿ ಶಾಸ್ತ್ರಿ ತಿಳಿಸಿದ್ದಾರೆ.ಕಳೆದ ನ.30 ರಿಂದ ಡಿ.6ರವರೆಗೆ ಪ್ರತಿ ದಿನ ಸಂಜೆ ಆರೂಢ ಮೇರು ಜೀವನ ಚರಿತ್ರೆ ಪಾರಾಯಣ ಪ್ರವಚನ ನಡೆದಿದ್ದು, ಡಿ.6ರ ಬೆಳಿಗ್ಗೆ ಕಾರ್ತಿಕ ಬಹುಳ ನವಮಿಯಂದು ಬ್ರಾಹ್ಮಿ ಮಹೂರ್ತದಲ್ಲಿ ಶ್ರೀ ಕರ್ತ ಗದ್ದುಗೆಗೆ ರುದ್ರಾಭೀಷೇಕ ನಡೆಯಲಿದೆ. ಸಂಜೆ 7 ಗಂಟೆಗೆ ಪುಣ್ಯಾರಾಧನೆ ಮಹೋತ್ಸವದ ಸಮಾರೋಪ ಸಮಾರಂಭ ನಡೆಯಲಿದ್ದು, ಇದರ ದಿವ್ಯ ಸಾನಿಧ್ಯವನ್ನು ಶ್ರೀ ಗುರು ಕಬೀರಾನಂದಾಶ್ರಮದ ಪೀಠಾಧ್ಯಕ್ಷರಾದ ಶ್ರೀ ಶಿವಲಿಂಗಾನಂದ ಶ್ರೀಗಳು ವಹಿಸಲಿದ್ದಾರೆ. ಹುಬ್ಬಳ್ಳಿಯ ಶ್ರೀ ಸಿದ್ಧಾರೂಢ ಮಠದ ಶ್ರೀ ಸಚ್ಚಿದಾನಂದ ಶ್ರೀಗಳು ಉಪಸ್ಥಿತರಿರುವವರು. ಚಳ್ಳಕೆರೆ ನಗರಸಭಾ ಸದಸ್ಯರಾದ ಕೆ.ಸಿ.ನಾಗರಾಜ್, ನಗರಸಭೆಯ ಮಾಜಿ ಅಧ್ಯಕ್ಷರಾದ ಶ್ರೀಮತಿ ತಿಪ್ಪಮ್ಮ ವೆಂಕಟೇಶ್, ನಗರಾಭೀವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಟಿ.ಬದರಿನಾಥ್, ಮಾಜಿ ಸದಸ್ಯರಾದ ಶ್ರೀಮತಿ ಎ.ರೇಖಾ ಸಾಹಿತಿಗಳಾದ ಬಿ.ಆರ್.ಪುಟ್ಟಪ್ಪ ಹಾಗೂ ಮಾತೃಶ್ರೀ ವಿದ್ಯಾ ಸಂಸ್ಥೆಯಕಾರ್ಯದರ್ಶಿಗಳಾದವಿ.ಎಲ್.ಪ್ರಶಾಂತ್ ಭಾಗವಹಿಸಲಿದ್ದಾರೆ ಎಂದು ತಿಳಿಸಿದ್ದಾರೆ.

# ರೈಲ್ವೆ ಅಂಡರ್ ಪಾಸ್ ನಿರ್ಮಾಣಕ್ಕೆ ಕ್ರಮ: ಡಿಸಿ

» ದಾವಣಗೆರೆ

ನಗರದ ಅಶೋಕ ಟಾಕೀಸ್ ಬಳಿ ರೈಲ್ವೆ ಅಂಡರ್ ಬಸ್ ನಿರ್ಮಾಣಕ್ಕೆ ಅಗತ್ಯವಿರುವ ಸ್ವತ್ತುಗಳನ್ನು ಭೂ ಸ್ವಾಧೀನಕ್ಕೆ ಪ್ರಸ್ತಾವನೆ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ಅಧಿಕಾರಿಗಳಿಗೆ ಸೂಚಿಸಿದರು.

ಸೋಮವಾರ ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಶೋಕ ಟಾಕೀಸ್ ಬಳಿ ರೈಲ್ವೆ ಅಂಡರ್ ಪಾಸ್ ನಿರ್ಮಾಣ ಕುರಿತಂತೆ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನಗರದ ಅಶೋಕ ಟಾಕೀಸ್ ಬಳಿಯ ರೈಲ್ವೆ ಅಂಡರ್ ಪಾಸ್ ನಿರ್ಮಾಣಕ್ಕೆ ಕೇಂದ್ರ ಸರ್ಕಾರವು ರೂ.49 ಕೋಟಿ ಅನುದಾನ ಬಿಡುಗಡೆಗೊಳಿಸಿದ್ದು, ಕೂಡಲೇ ರೈಲ್ವೆ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಅಗತ್ಯವಿರುವ ಸತ್ತುಗಳನ್ನು ಭೂಸ್ವಾಧೀನಕ್ಕೆ ಪ್ರಸ್ತಾವನೆ ಸಲ್ಲಿಸುವಂತೆ ಸೂಚನೆ ನೀಡಿದರು. ಉಪ ವಿಭಾಗಾಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಮುಂದಿನ ಕ್ರಮ ಕೈಗೊಳ್ಳಬೇಕು ಎಂದರು.



ತುಮಕೂರು–ದಾವಣಗೆರೆ ನೇರ ರೈಲು ಮಾರ್ಗವು ದಾವಣಗೆರೆ ತಾಲ್ಲೂಕಿನ ತೋಳಹುಣಸೆ, ಬುಳ್ಳಾಪುರ, ಆನಗೋಡು, ನೀರ್ಥಡಿ, ಹೆಬ್ಬಾಳ, ಹುಣಸೇಕಟ್ಟೆ, ಪಂಚೇನಹಳ್ಳಿ, ಚಿಕ್ಕವ್ವನಹಳ್ಳಿ, ಕರೆಲಕ್ಕೇನಹಳ್ಳಿ, ಚಟ್ಟೋಬನಹಳ್ಳಿ, ಕೊಗ್ಗನೂರು, ಹಾಲುವರ್ತಿ ಗ್ರಾಮಗಳ ಮೂಲಕ ರೈಲು ಮಾರ್ಗ ಹಾದು ಹೋಗಲಿದ್ದು, ರಂಗವ್ವನಹಳ್ಳಿ ಹಾಗೂ ಚಟ್ಟೋಬನಹಳ್ಳಿಯಲ್ಲಿ ಬಾಕಿ ಇರುವ ಭೂಸ್ವಾಧೀನ ಪ್ರಕ್ರಿಯೆಯನ್ನು ಶೀಘ್ರವೇ ರೈತರ ಜಮೀನುಗಳನ್ನು ಸರ್ವೆ ಅಧಿಕಾರಿಗಳು ಪರಿಶೀಲಿಸಬೇಕು. ಸರ್ಕಾರ ನಿಗಧಿಪಡಿಸಿರುವ ನಿಗದಿತ ದರವನ್ನು ಅರ್ಹ ರೈತರಿಗೆ ಪಾವತಿಸಿ, ಆರ್.ಟಿ.ಸಿ ತಿದ್ದುಪಡಿ ಮಾಡಿ ಕ್ರಯ ಮಾಡಿಕೊಳ್ಳಬೇಕು ಎಂದರು.

ರೈಲ್ವೇ ಮತ್ತು ಕಂದಾಯ ಇಲಾಖೆಗಳ ಮೂಲಕ ಈಗಾಗಲೇ ಸರ್ವೇ ಕಾರ್ಯ ಆರಂಭಗೊಂಡಿದ್ದು, ಶೀಘ್ರವೇ ಸ್ವಾಧೀನಕ್ಕೆ ಒಳಪಡುವ ಜಮೀನುಗಳ ಮೂಲ ದಾಖಲೆಗಳನ್ನು ಪರಿಶೀಲಿಸಿ ಪೋಡಿ ದುರಸ್ತಿ ಕಾರ್ಯ ನಡೆಸಬೇಕು. ರೈತರು ಯಾವುದೇ ಗೊಂದಲಕ್ಕೆ ಒಳಗಾಗದಂತೆ ನ್ಯಾಯ ಸಮ್ಮತವಾಗಿ ಭೂಸ್ವಾಧೀನ ಮಾಡಿಕೊಳ್ಳಬೇಕು. ರೈಲ್ವೆ ಮಾರ್ಗ ಹಾದು ಹೋಗಿರುವ ಜಮೀನುಗಳಲ್ಲಿ ಯಾವುದೇ ತಕರಾರು, ಇಂಡೀಕರಣ, ಪೋಡಿ ಹಾಗೂ ತಾಂತ್ರಿಕ ಸಮಸ್ಯೆಗಳಾದಲ್ಲಿ ಶೀಘ್ರವೇ ಪರಿಹರಿಸಬೇಕು ಹಾಗೂ ಅರಣ್ಯ ಪ್ರದೇಶದಲ್ಲಿ ಸಾಗುಮಾಡಿದವರಿಗೆ ಬೇರೆಡೆ ಜಮೀನು ನೀಡಿ ಸಕ್ರಮಗೊಳಿಸಿಕೊಳ್ಳಬೇಕು ಎಂದರು.

ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್, ಉಪವಿಭಾಗಾಧಿಕಾರಿ ದುರ್ಗಾಶ್ರೀ, ಜಿಲ್ಲಾ ಭೂ ದಾಖಲೆಗಳ ಉಪನಿರ್ದೇಶಕಿ ಭಾವನಾ ಬಸವರಾಜ್ ಹಾಗೂ ರೈಲ್ವೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಪ್ರತಿಯೊಬ್ಬ ರೈತರೂ ತಮ್ಮ ಜಮೀನಿನ ಫಲವತ್ತತೆ ಅರಿಯಲು ಮಣ್ಣು ಪರೀಕ್ಷೆ ಮಾಡಿಸಿ: ಜೆ.ಅಶೋಕ್

» ಚಳ್ಳಕೆರೆ

ಪ್ರತಿಯೊಬ್ಬ ರೈತರೂ ತಾವು ಬೆಳೆಯುವ ಜಮೀನಿನ ಮಣ್ಣಿನ ಗುಣಲಕ್ಷಣಗಳನ್ನು ಅರಿಯಲು ಮಣ್ಣು ಪರೀಕ್ಷೆ ಮಾಡಿಸಬೇಕು. ನಿಮ್ಮ ಜಮೀನಿನ ಮಣ್ಣು ಪರೀಕ್ಷೆಯಿಂದ ಮಣ್ಣಿನಲ್ಲಿ ಉಂಟಾಗುವ ಲೋಪದೋಷಗಳ ಬಗ್ಗೆ ಮಾಹಿತಿ ಪಡೆದು ಅದನ್ನು ಸರಿಪಡಿಸುವ ಪ್ರಾಮಾಣಿಕ ಪ್ರಯತ್ನ ಮಾಡಬಹುದು. ಕೃಷಿ ಇಲಾಖೆ ಈ ನಿಟ್ಟಿನಲ್ಲಿ ಎಲ್ಲಾ ರೈತ ಮಣ್ಣು ಪರೀಕ್ಷೆಯನ್ನು ಮಾಡಿಸಲು ಸಕಲಸಿದ್ದತೆ ಮಾಡಿಕೊಂಡಿದೆ ಎಂದು ಸಹಾಯಕ ಕೃಷಿ ನಿರ್ದೇಶಕ ಜೆ.ಅಶೋಕ್ ತಿಳಿಸಿದರು.

ಅವರು, ತಾಲ್ಲೂಕಿನ ನನ್ನಿವಾಳ ಗ್ರಾಮದಲ್ಲಿ ವಿಶ್ವಮಣ್ಣು ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಕೃಷಿ ಇಲಾಖೆ ಸಹಯೋಗದೊಂದಿಗೆ ರೈತ ಜಮೀನುಗಳ ಮಣ್ಣು ಪರೀಕ್ಷೆ ನಡೆಯುತ್ತಲೇ ಇದೆ. ಆದರೆ, ಇತ್ತೀಚಿನ ದಿನಗಳಲ್ಲಿ ಸರ್ಕಾರ ಎಲ್ಲಾ ರೈತ ಜಮೀನುಗಳ ಮಣ್ಣು ಪರೀಕ್ಷೆ ನಡೆಸಲು ಸೂಚನೆ ನೀಡಿದ್ದು, ಈಗಾಗಲೇ ತಾಲ್ಲೂಕಿನ ಸಾವಿರಾರು ರೈತ ಜಮೀನಿನ ಮಣ್ಣು ಪರೀಕ್ಷೆಯನ್ನುಇಲಾಖೆವತಿಯಿಂದಮಾಡಲಾಗಿದೆ ಎಂದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶಿವಮ್ಮರಾಜಣ್ಣ ವಹಿಸಿದ್ದರು. ಗ್ರಾಮ ಪಂಚಾಯಿತಿ ಸದಸ್ಯರಾದ ಬಂಡೆಹಟ್ಟಿ ತಿಪ್ಪೇಸ್ವಾಮಿ, ದೊರೆಅಪ್ಪಣ್ಣ, ಚಿನ್ನಯ್ಯ, ಗೀತಪಾಪಣ್ಣ, ಪಿಡಿಒ ಇನಾಯಿತ್‌ಪಾಷ, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ದೊರೆಬೈಯಣ್ಣ ಉಪಸ್ಥಿತರಿದ್ದರು.



# ಸಖಿ–ಒನ್ ಸ್ಟಾಪ್ ಸೆಂಟರ್‌ನ ಜಿಲ್ಲಾ ಮಟ್ಟದ ಪರಿಶೀಲನಾ ಸಭೆ




» ದಾವಣಗೆರೆ

ಕಾಣೆಯಾದ ಪ್ರಕರಣಗಳಲ್ಲಿ ಹದಿಹರೆಯದ ವಯಸ್ಸಿನ ಮಕ್ಕಳೇ ಹೆಚ್ಚಾಗಿದ್ದು, ಈ ಹಂತದಲ್ಲಿ ಮಕ್ಕಳಿಗೆ ಅಗತ್ಯವಾದ ಮಾಹಿತಿ ಹಾಗೂ ಜಾಗೃತಿ ಮೂಡಿಸುವ ಕೆಲಸವನ್ನು ಸಖಿ–ಒನ್ ಸ್ಟಾಪ್ ಸೆಂಟರ್‌ಗಳ ಕೌನ್ಸಿಲರ್‌ಗಳು ಮತ್ತು ಶಾಲಾ ಶಿಕ್ಷಕರು ಮಾಡಬೇಕು ಎಂದು ಜಿಲ್ಲಾಧಿಕಾರಿ ಡಾ.ವೆಂಕಟೇಶ್ ಎಂ.ವಿ ಅಧಿಕಾರಿಗಳಿಗೆ ತಿಳಿಸಿದರು.

ಮಂಗಳವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಸಖಿ–ಒನ್ ಸ್ಟಾಪ್ ಸೆಂಟರ್‌ನ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.ಶಿಕ್ಷಕರು ವಿದ್ಯಾರ್ಥಿಗಳೊಂದಿಗೆ ಭಾವನಾತ್ಮಕವಾದ ಒಡನಾಟ ಹೊಂದುವುದು ಅತ್ಯವಶ್ಯಕ. ಶಾಲೆಗಳಲ್ಲಿ ಶಿಕ್ಷಕರು ಪ್ರಮುಖವಾಗಿ 8, 9 ಮತ್ತು 10ನೇ ತರಗತಿಯ ಮಕ್ಕಳ ಶೈಕ್ಷಣಿಕ ಹಾಗೂ ಸಾಮಾಜಿಕ ಭಾಗವಹಿಸುವಿಕೆಯನ್ನು ಗಮನಿಸಬೇಕು. ಯಾವುದೇ ರೀತಿಯ ಅನುಮಾನ ಬಂದಲ್ಲಿ ಅವರನ್ನು ಸಂದರ್ಶನಕ್ಕೆ ಒಳಪಡಿಸಿ ಸಮಸ್ಯೆಯನ್ನು ತಿಳಿದುಕೊಳ್ಳಬೇಕು ಮತ್ತು ಅದನ್ನು ಬಗೆಹರಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಬೇಕು.

ಅತ್ಯಾಚಾರ, ಅಪಹರಣ, ಬಾಲ್ಯವಿವಾಹ, ಸೈಬರ್ ಅಪರಾಧ ಮುಂತಾದ ಪ್ರಕರಣಗಳಿಗೆ ಸಂಬಂಧಿಸಿದಂತೆ ಹದಿಹರೆಯದವರಲ್ಲಿ ಜಾಗೃತಿ ಮೂಡಿಸುವುದು ಅತ್ಯಂತ ಅವಶ್ಯಕವಾಗಿದೆ ಎಂದರು.ಸಖಿ–ಒನ್ ಸ್ಟಾಪ್ ಸೆಂಟರ್‌ಗಳಲ್ಲಿ ಸಂಕಷ್ಟದಲ್ಲಿರುವ ಮಹಿಳೆಯರಿಗೆ ವೈದ್ಯಕೀಯ, ಕಾನೂನು, ಮಾನಸಿಕ, ಸಾಮಾಜಿಕ ಬೆಂಬಲ ಮತ್ತು ತಾತ್ಕಾಲಿಕ ಆಶ್ರಯ ಸೇವೆಗಳನ್ನು ಒದಗಿಸಬೇಕು ಎಂದರು.

ಕೌಟುಂಬಿಕ ದೌರ್ಜನ್ಯಕ್ಕೆ, ಶೋಷಣೆಗೆ ಒಳಗಾದ ಮಹಿಳೆಯರು ಬಂದಾಗ ತಕ್ಷಣವೇ ಎಫ್.ಐ.ಆರ್ ದಾಖಲಿಸದೇ ಮೊದಲನೆಯದಾಗಿ ಸಮಸ್ಯೆಯನ್ನು ಬಗೆಹರಿಸುವ ನಿಟ್ಟಿನಲ್ಲಿ ಸಂತ್ರಸ್ಥೆ ಹಾಗೂ ಅವರ ಕುಟುಂಬದವರೊಂದಿಗೂ ಆಪ್ತ ಸಮಾಲೋಚನೆ ನಡೆಸುವ ಮೂಲಕ ಸಮಸ್ಯೆಗೆ ಪರಿಹಾರವನ್ನು ಒದಗಿಸುವ ಕೆಲಸ ಮಾಡಬೇಕು. ಇಲ್ಲವಾದಲ್ಲಿ ಇದು ಸಾಮಾಜಿಕ ಸಮಸ್ಯೆಯನ್ನು ಉಂಟುಮಾಡುತ್ತದೆ ಎಂದರು.

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪ ನಿರ್ದೇಶಕಿ ವಾಸಂತಿ ಉಪ್ಪಾರ್ ಮಾತನಾಡಿ ಜಿಲ್ಲೆಯಲ್ಲಿ ಏಪ್ರಿಲ್‌ನಿಂದ ಇಲ್ಲಿಯವರೆಗೆ ಮಕ್ಕಳಿಗೆ ಸಂಬಂಧಿಸಿದಂತೆ 61 ಪ್ರಕರಣಗಳು ಹಾಗೂ ಕೌಟುಂಬಿಕ ಸಮಸ್ಯೆಗಳಿಗೆ ಸಂಬಂಧಿಸಿದಂತೆ 46 ಪ್ರಕರಣ ಸೇರಿದಂತೆ ಒಟ್ಟು 107 ಪ್ರಕರಣಗಳು ದಾಖಲಾಗಿವೆ ಎಂಬ ಮಾಹಿತಿ ನೀಡಿದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಕೃಷ್ಣನಾಯ್ಕ್, ಮಹಿಳಾ ಪೊಲೀಸ್ ಠಾಣೆಯ ಪೊಲೀಸ್ ಅಧಿಕಾರಿ ನೂರ್ ಅಹಮದ್, ಜಿಲ್ಲಾ ಸರ್ಜನ್ ಡಾ.ನಾಗೇಂದ್ರಪ್ಪ ಎನ್.ಬಿ, ಮಕ್ಕಳ ರಕ್ಷಣಾ ಘಟಕಾಧಿಕಾರಿ ರಾಜಕುಮಾರ್, ಶುಭೋದಯ ಸೇವಾ ಸಂಸ್ಥೆ ಕಾರ್ಯದರ್ಶಿ ಕುಮಾರ್ ಹೆಚ್.ಬಿ ಉಪಸ್ಥಿತರಿದ್ದರು.

# ಮುರುಳೀದರ ಅವರ ಕಥಾಗುಚ್ಚ ಲೋಕಾರ್ಪಣೆ

» ಹೊಸದುರ್ಗ

ಪ್ರತಿಯೊಬ್ಬರಲ್ಲೂ ಸಹಾ ಓದಿನ ಅಭಿರುಚಿ ಇರಬೇಕು ನಾವು ನಿತ್ಯವೂ ಹಸಿವಿಗಾಗಿ ಊಟ ಮಾಡುತ್ತೇವೋ ಹಾಗೆ ಜ್ಞಾನ ಹಾಗೂ ಅಧ್ಯಾಯನದ ಹಸಿವು ಇದ್ದರೆ ಮಹಾಜ್ಞಾನಿಗಳ ಪುಸ್ತಕಗಳನ್ನ ಓದಿದರೆ ಮಾತ್ರ ನಮ್ಮಗಳ ಜ್ಞಾನ ಹೆಚ್ಚುತ್ತದೆ ಎಂದು ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ಹೆಚ್.ಬಿಲ್ಲಪ್ಪ ಕರೆ ನೀಡಿದರು.

ಪಟ್ಟಣದ ಶ್ರೀ ರಾಮಕೃಷ್ಣ ಸದನದಲ್ಲಿ ಅನಿಕೇತನ ವಿಚಾರ ವೇದಿಕೆ ಆಯೋಜಿಸಿದ್ದ ಚಿತ್ರದುರ್ಗ ಸರ್ಕಾರಿ ಕಾಲೇಜಿನ ಪ್ರಾಧ್ಯಾಪಕ ಮುರುಳೀದರ ಬಿ, ಅವರ "ಕಥಾಗುಚ್ಚ" ಕೃತಿಯನ್ನು ಲೋಕಾರ್ಪಣೆ ಮಾಡಿ ಮಾತನಾಡಿದರು.

ಸಾಹಿತ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುವವರು ವಿದ್ಯಾರ್ಥಿಗಳಂತೆ ನಿತ್ಯವೂ ಸಹಾ ನಿರಂತರವಾಗಿ ಅಧ್ಯಾಯನ ಶೀಲರಾಗಬೇಕು.

ಕುವೆಂಪು. ದಾ.ರಾ.ಬೇಂದ್ರೆ, ಡಾ:ಶಿವರಾಮ್‌ಕಾರಂತ, ಮತ್ತಿತರೆ ಮೇರು ಲೇಖಕರ ಪುಸ್ತಕಗಳನ್ನು ಓದುತ್ತಾ ನಮ್ಮ ಜ್ಞಾನವನ್ನ ಹೆಚ್ಚಿಸಿಕೊಳ್ಳಬೇಕು ಹಾಗೆ ನಮಗೆ ಬರವಣಿಗೆಯ ಹಿಡಿತ ಸಿಗುತ್ತದೆ ಈ ನಿಟ್ಟಿನಲ್ಲಿ ಲೇಖಕ ಮುರುಳೀದರ ಅವರು ಕಥಾಗುಚ್ಚ ಎಂಬ ಉತ್ತಮ ಕೃತಿಯನ್ನ ಹೊರ ತಂದಿರುವುದು ನಿಜಕ್ಕೂ ಸಂತಸ ತಂದಿದೆ ಎಂದು ಅಭಿಪ್ರಾಯಿಸಿದ ಅವರು ಇಂದಿನ ಯುವ ಪೀಳಿಗೆಯಲ್ಲಿ ಮೋಬೈಲ್ ಗೀಳು ಹೋಗಿ ಪುಸ್ತಕಗಳನ್ನು ಓದುವ ಗೀಳು ಬೆಳಸಿಕೊಳ್ಳಬೇಕಿದೆ ಎಂದರು.




ಚಿತ್ರದುರ್ಗ ಸರ್ಕಾರಿ ವಿಜ್ಞಾನ ಕಾಲೇಜಿನ ಸಹ ಪ್ರಾಧ್ಯಾಪಕ ಹೆಚ್.ವಿ.ನಾಗರಾಜ್ ಮಾತನಾಡಿ ಲೇಖಕ ಮುರುಳಿಧರ ಅವರು ಹೊರ ತಂದಿರುವ ಈ ಕೃತಿ ವಿಶೇಷವಾಗಿದ್ದು ಈ ಕೃತಿಯಲ್ಲಿ ಪ್ರಮುಖವಾದವುಗಳೆಂದರೆ ಮನೋಹರ,ಕೈಗೆ ಬಂದ್ದು ಬಾಯಿಗೆ ಬಾರದಾಯಿತು ಈಗೆ ಹಲವಾರು ಕಥೆಗಳನ್ನ ಜೀವನದಲ್ಲಿ ನಡೆದ ಘಟನೆಗಳನ್ನ ಕಣ್ಮುಂದೆ ತಂದು ಪಾತ್ರಗಳನ್ನ ಜೀವಂತಗೊಳಿಸಿದ್ದಾರೆ ಎಂದ ಅವರು ಇಂದು ಕನ್ನಡ ಭಾಷೆಯ ಮುಂದಿನ ಸವಾಲುಗಳ ಬಗ್ಗೆ ವಿಶೇಷ ಉಪನ್ಯಾಸ ನೀಡಿದರು.

ಕೃತಿಯ ಲೇಖಕ ಮುರುಳಿಧರ ಮಾತನಾಡಿ ಹತ್ತವರಿಗೆ ಹಗ್ಗಣ ಮುದ್ದು ಎನ್ನುವಂತೆ ಹಾಗಬಾರದು ನಮ್ಮ ಕೃತಿಯ ಬಗ್ಗೆ ಬಗ್ಗೆ ನಾವೆ ಹೆಮ್ಮೆಪಡಬಾರದು ನಾವು ಬೇರೆ ಬೇರೆ ಕೃತಿಗಳನ್ನ ಅಧ್ಯಾಯನ ಮಾಡಬೇಕು,ಹೆಚ್ಚು ಹೆಚ್ಚು ಕೃತಿಗಳನ್ನ ರಚನೆ ಮಾಡುತ್ತಾ ಹೋಗಬೇಕು, ಉನ್ನತವಾದವಾದ ವಿಚಾರ ಅದ್ಭುತವಾದ ಭಾಷೆ ಸೂಕ್ತವಾದಂತಹ ಪದಗಳು ಮತ್ತು ಸೂಕ್ತವಾದ ಸಂಯೋಜನೆ ಇವೆಲ್ಲವೂ ಸೇರಿದರೆ ಮಾತ್ರ ಉನ್ನತ ಕೃತಿಯಾಗಲು ಸಾಧ್ಯ ಎಂದರು.

ಈ ಸಂಧರ್ಬದಲ್ಲಿ ಹೊಸದುರ್ಗದ ಕವಿ ನಿಸಾರ್‌ಅಹಮ್ಮದ್, ನಾಗತಿಹಳ್ಳಿಮಂಜುನಾಥ್,ಶೇಷಗಿರಿರಾವ್,ಕವಿಯತ್ರಿ ಕುಮಾರ್ ಎಂ.ಆರ್.ನಳಿನ, ಶ್ರೀರಾಂಪುರ ಹೋಬಳಿ ಕ.ಸಾ.ಪ ಅಧ್ಯಕ್ಷ ರಮೇಶ್, ಶ್ರೀಮತಿ ಶ್ರೀವಿದ್ಯಾಮುರುಳೀದರ, ರೊಪ್ಪದ ಬಸವರಾಜ್, ಗಾಯಕ ಬಸವರಾಜ್, ಸುಬ್ರಮಣ್ಯಶೆಟ್ಟಿ, ಹಾಗೂ ಅನಿಕೇತನ ಬಳಗದ ಸದಸ್ಯರುಗಳು ಸೇರಿದಂತೆ ಸಾಹಿತ್ಯಾಭಿಮಾನಿಗಳು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

# ವಿಶ್ವ ಶಾಂತಿಗಾಗಿ ಪುನೀತ್ ಅಭಿಮಾನಿಯಿಂದ ಸೈಕಲ್ ಯಾತ್ರೆ

» ಹೊಸದುರ್ಗ

ಸೈಕಲ್ ಯಾತ್ರೆಯ ಮೂಲಕ ವಿಶ್ವ ದಾಖಲೆ ಬರೆಯಲು ಮುಂದಾಗಿರುವ ತಮಿಳುನಾಡಿನ ಕೊಯಮತ್ತೂರು ಮೂಲದ ಯುವಕ, ನಟ ಪುನೀತ್ ರಾಜಕುಮಾರ್ ಅಭಿಮಾನಿ ಮುತ್ತು ಸೆಲ್ವಂ ರಾಜ್ ಅವರನ್ನು ಪಟ್ಟಣದಲ್ಲಿ ಭಾನುವಾರ ವಿವಿಧ ಮುಖಂಡರು ಮತ್ತು ಪುನೀತ್ ರಾಜಕುಮಾರ್ ಅಭಿಮಾನಿಗಳು ಸ್ವಾಗತಿಸಿ ಸನ್ಮಾನಿಸಿದರು.

ಇದೇ ಸಂದರ್ಭದಲ್ಲಿ ಸದ್ಗುರು ಆಯುರ್ವೇದ ಸಂಸ್ಥೆಯ ಮಾಲೀಕರಾದ ಡಿ.ಎಸ್. ಪ್ರದೀಪ್ ಮಾತನಾಡಿ, ಕರ್ನಾಟಕ ರತ್ನ ಡಾ. ಪುನೀತ್ ರಾಜಕುಮಾರ್ ಅವರು ಕೇವಲ ಕರ್ನಾಟಕದಲ್ಲಿ ಮಾತ್ರವಲ್ಲದೇ, ದೇಶದ ಮೂಲೆ ಮೂಲೆಗಳಲ್ಲಿಯೂ ಅಭಿಮಾನಿಗಳನ್ನ ಹೊಂದಿದ್ದಾರೆ. ಅವರು ತಮ್ಮ ಜೀವಿತ ಅವಧಿಯಲ್ಲಿ ವಿಶ್ವಮಾನವರಾಗಿ ಬಾಳಿ ಬದುಕಿದ್ದರಿಂದಾಗಿ ರಾಜ್ಯ ಮಾತ್ರವಲ್ಲದೆ, ದೇಶದಾದ್ಯಂತ ಲಕ್ಷಾಂತರ ಅಭಿಮಾನಿಗಳನ್ನು ಹೊಂದಿದ್ದಾರೆ ಎಂದರು.ತಮಿಳುನಾಡು ಮೂಲದ ಅಭಿಮಾನಿಯೊಬ್ಬ 34 ರಾಜ್ಯಗಳ 733 ಜಿಲ್ಲೆಗಳಲ್ಲಿ ವಿಶ್ವಶಾಂತಿಗಾಗಿ ಪ್ರವಾಸ ಮಾಡಲು ಹೊರಟಿರುವುದು, ಭಾಷೆಗೂ ಮೀರಿದ ಅಭಿಮಾನವಾಗಿದೆ. ಪುನೀತ್ ರಾಜಕುಮಾರ್ ದತ್ತು ಪಡೆದಿರುವ ಶಾಲೆಗಳು, ಅನಾಥಾಶ್ರಮಗಳು, ಅವರ ಸಮಾಜಮುಖಿ ಸೇವೆಗಳು ನನಗೆ ಜೀವನದಲ್ಲಿ ಸಮಾಜ ಸೇವೆ ಮಾಡಲು ಪ್ರೇರಣೆಯಾಗಿವೆ. ಇಂತಹ ಅಭಿಮಾನಿಗಳನ್ನು ಪಡೆದ ಪುನೀತ್ ರಾಜಕುಮಾರ್ ಅವರು ನಿಜವಾಗಿಯೂ ನಮ್ಮೆಲ್ಲರ ದೈವವೇ ಆಗಿದ್ದಾರೆ ಎಂದು ಭಾವುಕರಾದರು.




ಪುರಸಭಾ ಮಾಜಿ ಸದಸ್ಯ ಪ್ರವೀಣ್ ಮಾತನಾಡಿ, ಹೊಸದುರ್ಗದ ಜನತೆ ಅಭಿಮಾನದಿಂದ ನಾವುಗಳು ತಮಿಳುನಾಡಿನ ಕೊಯಮುತ್ತೂರು ಮೂಲದ ಮುತ್ತು ಸೆಲ್ವನ್ ರಾಜ್ ರವರನ್ನು ಸ್ವಾಗತಿಸಿ ಸತ್ಕರಿಸಿ, ಅವರ ಈ ಸೈಕಲ್ ಜಾಥಾ ಯಾವುದೇ ಅಡೆತಡೆಗಳಿಲ್ಲದೆ ಮುನ್ನುಗ್ಗಿ ದೇಶದಾದ್ಯಂತ ಸಂಚರಿಸಿ ಗಿನ್ನಿಸ್ ದಾಖಲೆ ಸೇರುವಂತಾಗಲಿ ಎಂಬುದೇ ನಮ್ಮ ಆಶಯ ಎಂದು ಶುಭಕೋರಿದರು.ಈ ವೇಳೆ ವಿರಾಟ್ ಹಿಂದೂ ಮಹಾಸಾಗರ ಗಣಪತಿ ಸೇವಾ ಟ್ರಸ್ಟ್ ಅಧ್ಯಕ್ಷ ಪ್ರದೀಪ್, ಮಾಜಿ ಅಧ್ಯಕ್ಷ ಮನೋಜ್, ಮುಖಂಡ ಫಕ್ರುದ್ದೀನ್, ಡಾ.ರಾಜಕುಮಾರ್ ಅಭಿಮಾನಿಗಳ ಸಂಘದ ಉಪಾಧ್ಯಕ್ಷ ಗೌಡ್ರ ತಿಪ್ಪೇಸ್ವಾಮಿ, ಹೊಸಹಳ್ಳಿ ಚಂದ್ರು, ಪುನೀತ್ ರಾಜಕುಮಾರ್ ಅಭಿಮಾನಿಗಳು ಯಾತ್ರೆಗೆ ಶುಭ ಕೋರಿ ಬಸವೇಶ್ವರ ವೃತ್ತದಲ್ಲಿ ಮುತ್ತು ಸೆಲ್ವರಾಜ್ ಅವರನ್ನು ಅಭಿನಂದಿಸಿದರು.

## ಫಾಸ್ಟ್ ನ್ಯೂಸ್

### ತಾಲ್ಲೂಕು ಮಟ್ಟದ ವಿಶ್ವ ಏಡ್ಸ್ ತಡೆ ದಿನಾಚರಣೆ

» ದಾವಣಗೆರೆ

ಡಿ.8 ರಂದು ಬೆಳಿಗ್ಗೆ 11.30ಕ್ಕೆ ನಗರದ ಮೋತಿ ವೀರಪ್ಪ ಪದವಿಪೂರ್ವ ಕಾಲೇಜಿನಲ್ಲಿ ತಾಲ್ಲೂಕು ಮಟ್ಟದ ವಿಶ್ವ ಏಡ್ಸ್ ತಡೆ ದಿನಾಚರಣೆಯ ಕಾರ್ಯಕ್ರಮವನ್ನು "ಸಮುದಾಯಗಳು ಮುನ್ನಡೆಸಲಿ" ಎಂಬ ಘೋಷವಾಕ್ಯದೊಂದಿಗೆ ಆಯೋಜಿಸಲಾಗಿದೆ. ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ನಿಯಂತ್ರಣಾ ಘಟಕ ಹಾಗೂ ತಾಲ್ಲೂಕು ಪಂಚಾಯತ್, ಕಂದಾಯ ಇಲಾಖೆ, ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ, ದಾವಣಗೆರೆ ಇವರ ಸಹಯೋಗದಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಷಣ್ಮುಖಪ್ಪ.ಎಸ್ ಉದ್ಘಾಟಿಸುವರು. ಪ್ರಾಂಶುಪಾಲರಾದ ಪಂಚಾಕ್ಷರಪ್ಪ ಅಧ್ಯಕ್ಷತೆ ವಹಿಸುವರು. ಜಿಲ್ಲಾ ಪಂಚಾಯತ್ ಕಾನೂನು ಸಲಹೆಗಾರರಾದ ಮನೋಹರ್‌ಮಹೇಂದ್ರಕರ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ||ದೇವರಾಜ ಪಾಂಡುರಂಗ ಪಟಗೆ, ಜಿಗಟೇರಿ ಜಿಲ್ಲಾ ಆಸ್ಪತ್ರೆಯ ಎ.ಆರ್.ಟಿ.ಎಸ್.ಕೇಂದ್ರ ನೋಡಲ್ ಅಧಿಕಾರಿ ಡಾ||ಶಿವರಾಜ್.ಜಿ, ರಕ್ತ ನಿಧಿ ಕೇಂದ್ರದ ವೈದ್ಯಾಧಿಕಾರಿ ಡಾ. ಗೀತಾ.ಡಿ.ಹೆಚ್ ಘನ ಉಪಸ್ಥಿತರಾಗಿರುವರು. ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ ಜಿಲ್ಲಾಕಾರ್ಯಕ್ರಮ ಅಧಿಕಾರಿ ಡಾ. ಪಿ.ಡಿ.ಮುರುಳಿಧರ್ ಪ್ರಾಸ್ತಾವಿಕ ನುಡಿಗಳಾನ್ನಾಡುವರು.

### ಸಂವಿಧಾನ ಶಿಲ್ಪಿ ಭಾರತ ರತ್ನ ಅಂಬೇಡ್ಕರ್ 67ನೇ ಮಹಾಪರಿನಿರ್ವಾಣ

» ದಾವಣಗೆರೆ

ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ|| ಬಿ.ಆರ್. ಅಂಬೇಡ್ಕರ್‌ರವರ 67ನೇ ಮಹಾ ಪರಿನಿರ್ವಾಣ ದಿನಾಚರಣೆಯನ್ನು ಡಿಸೆಂಬರ್ 6 ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ ಅಧಿಕಾರಿಗಳು, ಸಿಬ್ಬಂದಿಗಳು, ಸಾರ್ವಜನಿಕರು, ದಲಿತ ಸಂಘಟನೆಯ ಮುಖಂಡರು ಹಾಗೂ ವಿವಿಧ ಸಂಘಟನೆಗಳ ಮುಖಂಡರುಗಳು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸಬೇಕೆಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ನಾಗರಾಜ್ ತಿಳಿಸಿದ್ದಾರೆ.

### ಸೈನಿಕ ಶಾಲೆಯ ಪ್ರವೇಶಕ್ಕಾಗಿ ಅರ್ಜಿ

» ಶಿವಮೊಗ್ಗ

ಕೊಡಗು ಸೈನಿಕ ಶಾಲೆಯಲ್ಲಿ 6 ಮತ್ತು 9ನೇ ತರಗತಿಯ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು https://exams.nta.ac.in/AISSEEಜಾಲತಾಣದಲ್ಲಿಡಿ.16ರೊಳಗೆ ಸಲ್ಲಿಸಬಹುದಾಗಿದೆ. ಲಿಖಿತ ಪರೀಕ್ಷೆಯನ್ನು ಜ.21 ರಂದು ನಡೆಸಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ www.sainikschoolkodagu.edu.in ಜಾಲತಾಣವನ್ನು ಸಂಪರ್ಕಿಸಬಹುದೆಂದು ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ ಉಪನಿರ್ದೇಶಕರಾದ ಡಾ.ಸಿ.ಎ ಹಿರೇಮಠ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


### ಫ್ರೂಟ್ಸ್ ತಂತ್ರಾಂಶದಲ್ಲಿ ಸಾಗುವಳಿ ಜಮೀನು ವಿವರ ಸೇರ್ಪಡೆ ಕಡ್ಡಾಯ

» ಶಿವಮೊಗ್ಗ

ರೈತರು ಬರ ಪರಿಹಾರ, ಬೆಳೆ ವಿಮೆ, ಬೆಂಬಲ ಬೆಲೆ ಯೋಜನೆ, ಕೃಷಿ ಪರಿಕರಗಳು ಮತ್ತು ಸವಲತ್ತುಗಳ ವಿತರಣೆ ಹಾಗೂ ಇನ್ನಿತರ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಫ್ರೂಟ್ಸ್ ತಂತ್ರಾಂಶದಲ್ಲಿ ತಮ್ಮ ಎಲ್ಲ ಸರ್ವೇ ನಂಬರ್‌ಗಳನ್ನು ಸೇರಿಸಿ ನೋಂದಣಿ ಹೊಂದಿರುವುದು ಕಡ್ಡಾಯವಾಗಿರುತ್ತದೆ. ಶಿವಮೊಗ್ಗ ಜಿಲ್ಲೆಯಲ್ಲಿ ಒಟ್ಟು 5,14,015 ಕೃಷಿ ಯೋಗ್ಯ ತಾಕುಗಳಿದ್ದು, ಅವುಗಳಲ್ಲಿ ಈಗಾಗಲೇ 3,30,309 ತಾಕುಗಳನ್ನು ನೋಂದಣಿ ಮಾಡಲಾಗಿದ್ದು 1,85,949 ತಾಕುಗಳ ನೋಂದಣಿ ಬಾಕಿ ಇರುತ್ತದೆ.ಶಿವಮೊಗ್ಗ, ಭದ್ರಾವತಿ, ತೀರ್ಥಹಳ್ಳಿ, ಸಾಗರ, ಹೊಸನಗರ, ಶಿಕಾರಿಪುರ, ಸೊರಬ ತಾಲ್ಲೂಕುಗಳನ್ನು ಈಗಾಗಲೇ ಬರಪೀಡಿತ ಎಂದು ಘೋಷಣೆಯಾಗಿರುವುದರಿಂದ ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿಯಾಗಿರುವ ಒಟ್ಟು ವಿಸ್ತೀರ್ಣ ಮತ್ತು ಬೆಳೆ ಸಮೀಕೆ ದತ್ತಾಂಶ ಆಧಾರದ ಮೇಲೆ ಬೆಳೆ ನಷ್ಟಪರಿಹಾರ ನೇರ ನಗದು ವರ್ಗಾವಣೆ ಮೂಲಕ ವಿತರಣೆಯಾಗಲಿರುವ ಕಾರಣ ರೈತರು ತಮ್ಮ ವ್ಯಾಪ್ತಿಯ ಕಂದಾಯ, ಕೃಷಿ, ತೋಟಗಾರಿಕೆ ಇಲಾಖಾ ಅಧಿಕಾರಿಗಳನ್ನು ಸಂಪರ್ಕಿಸಿ ವಿಶಿಷ್ಟ ಗುರುತಿನ ಸಂಖ್ಯೆಯನ್ನು ಪಡೆಯಲು ಕೋರಿದೆ. ನೇರವಾಗಿ ವರ್ಗಾವಣೆಯಾಗುವುದರಿಂದ ರೈತರು ತಮ್ಮ ಎಲ್ಲಾ ಸರ್ವೇ ನಂಬರ್‌ಗಳನ್ನು ಕಡ್ಡಾಯವಾಗಿ ಫ್ರೂಟ್ಸ್ ತಂತ್ರಾಂಶದಲ್ಲಿ ಸೇರ್ಪಡೆ ಮಾಡುವುದರಿಂದ ನೋಂದಣಿ ಮಾಡಿಕೊಳ್ಳಲು ಕೋರಿದೆ. ಜಿಲ್ಲೆಯಾದ್ಯಂತ ಫ್ರೂಟ್ಸ್ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗಿದ್ದು ರೈತ ಬಾಂಧವರು ತಮ್ಮ ಜಮೀನಿನ ಎಲ್ಲಾ ಪಹಣಿಗಳಿಗೆ ಆಧಾರ್ ಸಂಖ್ಯೆ, ಮೊಬೈಲ್ ಸಂಖ್ಯೆ, ಜಾರಿ ಪ್ರಮಾಣ ಪತ್ರ ಮತ್ತು ಬ್ಯಾಂಕ್ ವಿವರಗಳನ್ನು ಕೂಡಲೇ ಜೋಡಣೆ ಮಾಡಲು ತಮ್ಮ ವ್ಯಾಪ್ತಿಯ ಕಂದಾಯ ಇಲಾಖೆಯ ಗ್ರಾಮದ ಆಡಳಿತಾಧಿಕಾರಿಗಳು, ರೈತ ಸಂಪರ್ಕ ಕೇಂದ್ರ ಹಾಗೂ ತೋಟಗಾರಿಕೆ ಇಲಾಖೆಯನ್ನು ಸಂಪರ್ಕಿಸಬೇಕೆಂದು ತಿಳಿಸಿದ್ದಾರೆ.

# ಮದಕರಿ ಬಳಗದಿಂದ ಅರ್ಜುನನಿಗೆ ಶ್ರದ್ಧಾಂಜಲಿ

» ಚಿತ್ರದುರ್ಗ




ನಿನ್ನೆ ನಿಧನವಾದ ಅರ್ಜುನ(ಆನೆ)ಗೆ ಸಂತಾಪವನ್ನು ಸೂಚಿಸುವ ಕಾರ್ಯಕ್ರಮವನ್ನು ಚಿತ್ರದುರ್ಗ ನಗರದ ಜಿಲ್ಲಾಧಿಕಾರಿ ವೃತ್ತದಲ್ಲಿ ಮದಕರಿ ಬಳಗದ ವತಿಯಿಂದ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ಎಲ್ಲರೂ ಸಹ ಅರ್ಜುನ ಆನೆಯ ಭಾವಚಿತ್ರಕ್ಕೆ ಪುಷ್ಪ ನಮನವನ್ನು ಸಲ್ಲಿಸುವುದರಮೂಲಕಶ್ರದ್ಧಾಂಜಲಿಯನ್ನು ಅರ್ಪಿಸಿ ಸಂತಾಪವನ್ನು ಸೂಚಿಸಿದರು.

ಈ ಸಂದರ್ಭದಲ್ಲಿ ನಗರಸಭೆಯ ಮಾಜಿ ಅಧ್ಯಕ್ಷರು ಮತ್ತು ತಾಲೂಕು ನಾಯಕ ಸಮಾಜದ ಅಧ್ಯಕ್ಷ ಬಿ.ಕಾಂತರಾಜ್ ಮಾತನಾಡಿ ಅರ್ಜುನನನ್ನು ಕಳೆದುಕೊಂಡಿದ್ದು ನಮಗೆ ಅಪಾರವಾದ ದುಃಖವಾಗಿದೆ. ಸುಮಾರು 64 ವರ್ಷಗಳ ಕಾಲ ಬದುಕಿದ್ದು ಈ ಸಮಯದಲ್ಲಿ ಹಲವಾರು ಭಾರಿ ಮೈಸೂರಿನ ಅಂಬಾರಿಯನ್ನು ಹೊರುವುದರ ಮೂಲಕ ದಾಖಲೆಯನ್ನು ಮಾಡಿ ನಾಡಿನ ವೈಭವದ ಮೆರಗವಣಿಗೆಗಳಿಗೆ ಸಾಕ್ಷಿಯಾಗಿತ್ತು. ಇನ್ನೂ ಹಲವಾರು ವರ್ಷ ಅದು ಬಾಳುತ್ತಿತ್ತು ಆದರೆ ಅರಣ್ಯ ಅಧಿಕಾರಿಗಳ ನಿರ್ಲಕ್ಷ್ಯದಿಂದ ಅರ್ಜುನ ಸಾವನ್ನಪ್ಪಿದೆ ಎಂದರು.

ಈಹಿಂದೆಪುನೀತ್‌ರಾಜಕುಮಾರ್‌ರವರ ಸಾವನ್ನು ಯಾವ ರೀತಿ ಕರ್ನಾಟಕದ ಜನತೆ ಮೌನವಾಗಿ ನುಂಗಿಕೊಂಡಿದ್ದರೋ ಅದೇ ರೀತಿ ಅರ್ಜುನ ಆನೆಯ ಸಾವನ್ನು ಸಹ ಕರ್ನಾಟಕ ಜನತೆ ಮೌನವಾಗಿಯೇ ನುಂಗಿಕೊಂಡು ಸಂತಾಪವನ್ನು ಸೂಚಿಸಿದ್ದಾರೆ.ಅರ್ಜನ್ ಕರ್ನಾಟಕದ ಅತ್ಯಂತಪ್ರೀತಿಗೆಪಾತ್ರವಾದಪ್ರಾಣಿಯಾಗಿತ್ತು. ಇದನ್ನು ಕಳೆದು ಕೊಂಡಿರುವುದು ದುಃಖಕರವಾದ ಸಂಗತಿಯಾಗಿದೆ ಅದು ಶತಾಯಿಷಿಯಾಗುವ ಹಂತದಲ್ಲಿತ್ತು . 64 ವರ್ಷದ ಆರ್ಜನನ್ನು 18 ವರ್ಷದ ಆನೆಯ ಜೊತೆಗೆ ಸೆಣಸಾಟದ ಜೊತೆಗೆ ಬಿಟ್ಟಿದ್ದು ಇದರ ಸಾವಿಗೆ ಕಾರಣವಾಗಿದೆ. ಅರ್ಜನನ ಆತ್ಮಕ್ಕೆ ಶಾಂತಿಯನ್ನು ನೀಡಲಿ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮದಕರಿ ಬಳಗದ ಗೋಪಾಲಸ್ವಾಮಿ ನಾಯಕ್, ಕಾಂಗ್ರೆಸ್ ಮುಖಂಡರಾದ ಅಂಜಿನಪ್ಪ, ನಗರಸಭಾ ಸದಸ್ಯ ದೀಪು, ಮಾಜಿ ನಗರಸಭೆ ಸದಸ್ಯರಾದ ತಿಪ್ಪೇಸ್ವಾಮಿ, ಪರಮೇಶ್ವರಪ್ಪ, ಈಶ್ವರ್, ಕೇಶವ, ಅನಿಲ್ ಕುಮಾರ್, ಅರುಣ್, ಹರೀಶ್ ಕುಮಾರ್, ನಾಗರಾಜ್, ಚೇತನ ಪವನ ಕುಮಾರ್, ಸತೀಶ್ ಸೇರಿದಂತೆ ಇತರರು ಭಾಗವಹಿಸಿದ್ದರು.

# ಸದೃಢ ಆರೋಗ್ಯಕ್ಕೆ ಯೋಗ ಮದ್ದು

» ದಾವಣಗೆರೆ




ಸದೃಢ ಆರೋಗ್ಯ ಪಡೆಯಲು ಯೋಗಾಭ್ಯಾಸ ಒಂದೇ ಮಾರ್ಗವಾಗಿದ್ದು, ವಯಸ್ಸಿನ ಮಿತಿಯಿಲ್ಲದೇ ಪ್ರತಿಯೊಬ್ಬರು ಯೋಗ ಮಾಡಿ ಆರೋಗ್ಯ ಕಾಪಾಡಿಕೊಳ್ಳಬೇಕೆಂದು ಯೋಗ ಗುರು ಡಾ.ಎನ್.ಪರಶುರಾಮಪ್ಪ ಕಿವಿಮಾತು ಹೇಳಿದರು.

ನಗರದ ಎಂಸಿಸಿ ಬಿ ಬ್ಲಾಕ್ ನಲ್ಲಿರುವ ಎಸ್ ಎಎಸ್ ಎಸ್ ಯೋಗ ಫೆಡರೇಷನ್ ಕೇಂದ್ರದಲ್ಲಿ ಆಯೋಜಿಸಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಪ್ರತಿನಿತ್ಯ ಯೋಗಾಭ್ಯಾಸ ಮಾಡಿದರೆ, ಜೀವನುತ್ಸವ ಹೆಚ್ಚಾಗುತ್ತದೆ. ಅಷ್ಟೇ ಅಲ್ಲದೇ, ಮನುಷ್ಯನಜಂಜಾಟದಜೀವನದಲ್ಲಿ ಸದಾ ಲವಲವಿಕೆಯಿಂದರಲು ಯೋಗ ಮದ್ದಾಗಿದೆ ಎಂದು ಸಲಹೆ ನೀಡಿದರು. ಯೋಗ ಈಗ ಅಂತಾರಾಷ್ಟ್ರೀಯ ಕ್ರೀಡಾ ಸ್ಥಾನಮಾನ ಹೊಂದಿದ್ದು, ಪ್ರತಿಯೊಬ್ಬರೂ ಯೋಗ ಕರಗತ ಮಾಡಿಕೊಂಡು ಸ್ಪರ್ಧೆಗಳಲ್ಲಿ ಭಾಗವಹಿಸಿಚಿನ್ನ,ಬೆಳ್ಳಿಮತ್ತುಕಂಚಿನ ಪದಕಗಳನ್ನು ಪಡೆಯುವ ಜೊತೆಗೆ ಅತ್ಯುತ್ತಮ ಕ್ರೀಡಾಪಟುಗಳಾಗಿ ತಾಲೂಕು, ಜಿಲ್ಲಾ, ರಾಜ್ಯ, ರಾಷ್ಟ್ರೀಯ, ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡಬಹುದು ಎಂದು ಯೋಗ ಪಟುಗಳಿಗೆ ಆತ್ಮಸ್ಥೈರ್ಯ ತುಂಬಿದರು.ಈ ಸಂದರ್ಭಗಳಲ್ಲಿ ಎಸ್ ಎಎಸ್ ಎಸ್ ಯೋಗ ಫೆಡರೇಷನ್ ವತಿಯಿಂದ ದಾವಣಗೆರೆ ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಎಸ್.ಪಿ.ಗೀತಾ , ದಾವಣಗೆರೆ ಮಹಾನಗರ ಪಾಲಿಕೆಯ ಕನ್ನಡ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾಗಿರುವ ಲಾವಣ್ಯ ಶ್ರೀಧರ್ ಮತ್ತು ರಾಜ್ಯ ಮಟ್ಟದ ಡಾನ್ಸ್ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನ ಗಳಿಸಿದ ಕುಮಾರಿ ಅನುಷ್ಕಾ ಅವರನ್ನು ಗೌರವ ಸಮರ್ಪಣೆ ಮಾಡಲಾಯಿತು

ಕಾರ್ಯಕ್ರಮದಲ್ಲಿ ಯೋಗ ಫೆಡರೇಷನ್ ನ ಅಧ್ಯಕ್ಷ ರಾಜಣ್ಣ, ಉಪಾಧ್ಯಕ್ಷರಾದ ಎಂ.ಎನ್. ಗೋಪಾಲ್ ಸ್ವಾಮಿ, ಗುರುಸ್ವಾಮಿ, ಖಜಾಂಚಿ ಎಸ್.ರಾಜಶೇಖರ್, ನಿರ್ದೇಶಕರಾದ ಪಿ.ಅಜ್ಜಯ್ಯ, ಸೇರಿದಂತೆ ಇನ್ನಿತರರಿದ್ದರು.

## ಹುಣಸೆಕಟ್ಟೆ: ವಿಶ್ವ ಮಣ್ಣು ದಿನಾಚರಣೆ




» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ತುರುವನೂರು ಹೋಬಳಿ ಹುಣಸೆಕಟ್ಟೆ ಗ್ರಾಮದಲ್ಲಿ ಮಂಗಳವಾರ ಕೃಷಿ ಇಲಾಖೆ ವತಿಯಿಂದ ವಿಶ್ವ ಮಣ್ಣು ದಿನಾಚರಣೆ ಕಾರ್ಯಕ್ರಮ ಆಚರಿಸಲಾಯಿತು. ಕೃಷಿ ಇಲಾಖೆಯ ಉಪ ಕೃಷಿ ನಿರ್ದೇಶಕ ಡಾ.ಶಿವಕುಮಾರ್, ಸಹಾಯಕ ಕೃಷಿ ನಿರ್ದೇಶಕ ಚಂದ್ರಕುಮಾರ್, ಸಹಾಯಕ ಕೃಷಿ ನಿರ್ದೇಶಕ ವಿಷಯ ತಜ್ಞ ಡಾ.ಮಂಜುನಾಥ ಸ್ವಾಮಿ, ಕೃಷಿ ತಂತ್ರಜ್ಞರ ಸಂಸ್ಥೆ ಅಧ್ಯಕ್ಷ ಡಾ.ರಂಗಸ್ವಾಮಿ, ಕಾರ್ಯದರ್ಶಿ ಡಾ.ವೀರಭದ್ರರೆಡ್ಡಿ, ಕೆವಿಕೆ ಹಿರಿಯ ವಿಜ್ಞಾನಿ ಡಾ.ಓಂಕಾರಪ್ಪ ಹಾಗೂ ಹುಣಸೆಕಟ್ಟೆ ಗ್ರಾಮದ ರೈತರು, ಗ್ರಾಮ ಪಂಚಾಯಿತಿ ಸದಸ್ಯರು ಇದ್ದರು.

## ವಿಕಲಚೇತನರು ಸದಾ ಉತ್ಸಾಹಿಗಳಾಗಿರಬೇಕು: ಲೋಕೇಶ್



» ದಾವಣಗೆರೆ

ವಿಕಲಚೇತನರು ಸದಾ ಉತ್ಸಾಹಿಗಳಾಗಿರಬೇಕು ಮತ್ತು ಎಲ್ಲಾ ಕ್ಷೇತ್ರಗಳಲ್ಲಿಯೂ ಭಾಗವಹಿಸಿ ಸಾಧನೆ ಮಾಡಬೇಕು ಎಂದು ಅಪರ ಜಿಲ್ಲಾಧಿಕಾರಿ ಪಿ.ಎನ್ ಲೋಕೇಶ್ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಹಯೋಗದೊಂದಿಗೆ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಜರುಗಿದ ವಿಶ್ವ ವಿಕಲಚೇತನರ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ವಿಕಲಚೇತನರ ದಿನಾಚರಣೆಗೆ ವಿಶ್ವಸಂಸ್ಥೆಯು ವಿಕಲಚೇತನರಿಗಾಗಿ, ವಿಕಲಚೇತನರೊಂದಿಗೆ, ವಿಕಲಚೇತನರಿಂದ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಂರಕ್ಷಿಸಲು ಮತ್ತು ಸಾಧಿಸಲು ಕಾರ್ಯಪ್ರವೃತ್ತವಾಗುವಿಕೆಯಲ್ಲಿ ಒಗ್ಗಟ್ಟು ಎಂಬ ಘೋಷ ವಾಕ್ಯವನ್ನು ನೀಡಿದ್ದು, ವಿಕಲಚೇತನರನ್ನು ಸಮಾಜದ ಮುಖ್ಯವಾಹಿಗೆ ತರುವ ಕುರಿತು ಜಾಗೃತಿ, ಸಮಾನ ಅವಕಾಶ ಹಾಗೂ ಸೌಲಭ್ಯ ಕಲ್ಪಿಸುವುದು ಈ ದಿನದ ಉದ್ದೇಶವಾಗಿದೆ ಎಂದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ.ಇಟ್ನಾಳ್ ಮಾತನಾಡಿ ಸರ್ವರಿಗೂ ಸಮಬಾಳು ಸರ್ವರಿಗೂ ಸಮಪಾಲು ಎಂಬ ಮಾತು ನಿಜ ಆಗಬೇಕಾದರೆ ರಾಜ್ಯ ಹಾಗೂ ಕೇಂದ್ರ ಸರ್ಕಾರದ ವಿಕಲಚೇತನರ ಕಾಯ್ದೆಗಳನ್ನು ಸಮರ್ಪಕವಾಗಿ ಅನುಷ್ಠಾನ ಮಾಡಿದಾಗ ಮಾತ್ರ ಸಾಧ್ಯ. ಜಿಲ್ಲೆಯಲ್ಲಿರುವ ವಿ.ಆರ್.ಡಬ್ಲ್ಯೂ ಮತ್ತು ಎಮ್.ಆರ್. ಡಬ್ಲ್ಯೂ ಹಾಗೂ ಸಂಘ ಸಂಸ್ಥೆಗಳು ಅತ್ಯಂತ ಕ್ರಿಯಾಶೀಲರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

# ಜಮೀನಿನ ಫಲವತ್ತತೆ ಅರಿಯಲು ಮಣ್ಣು ಪರೀಕ್ಷೆ ಮಾಡಿಸಿ

» ಚಳ್ಳಕೆರೆ




ಪ್ರತಿಯೊಬ್ಬ ರೈತರೂ ತಾವು ಬೆಳೆಯುವ ಜಮೀನಿನ ಮಣ್ಣಿನ ಗುಣಲಕ್ಷಣಗಳನ್ನು ಅರಿಯಲು ಮಣ್ಣು ಪರೀಕ್ಷೆ ಮಾಡಿಸಬೇಕು. ನಿಮ್ಮ ಜಮೀನಿನ ಮಣ್ಣು ಪರೀಕ್ಷೆಯಿಂದ ಮಣ್ಣಿನಲ್ಲಿ ಉಂಟಾಗುವ ಲೋಪದೋಷಗಳ ಬಗ್ಗೆ ಮಾಹಿತಿ ಪಡೆದು ಅದನ್ನು ಸರಿಪಡಿಸುವ ಪ್ರಾಮಾಣಿಕ ಪ್ರಯತ್ನ ಮಾಡಬಹುದು. ಕೃಷಿ ಇಲಾಖೆ ಈ ನಿಟ್ಟಿನಲ್ಲಿ ಎಲ್ಲಾ ರೈತ ಮಣ್ಣು ಪರೀಕ್ಷೆಯನ್ನು ಮಾಡಿಸಲು ಸಕಲಸಿದ್ದತೆ ಮಾಡಿಕೊಂಡಿದೆ ಎಂದು ಸಹಾಯಕ ಕೃಷಿ ನಿರ್ದೇಶಕ ಜೆ.ಅಶೋಕ್ ತಿಳಿಸಿದರು.

ಅವರು, ತಾಲ್ಲೂಕಿನ ನನ್ನಿವಾಳ ಗ್ರಾಮದಲ್ಲಿ ವಿಶ್ವಮಣ್ಣು ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಕಳೆದ ಹಲವಾರು ವರ್ಷಗಳಿಂದ ಕೃಷಿ ಇಲಾಖೆ ಸಹಯೋಗದೊಂದಿಗೆ ರೈತ ಜಮೀನುಗಳ ಮಣ್ಣು ಪರೀಕ್ಷೆ ನಡೆಯುತ್ತಲೇ ಇದೆ. ಆದರೆ, ಇತ್ತೀಚಿನ ದಿನಗಳಲ್ಲಿ ಸರ್ಕಾರ ಎಲ್ಲಾ ರೈತ ಜಮೀನುಗಳ ಮಣ್ಣು ಪರೀಕ್ಷೆ ನಡೆಸಲು ಸೂಚನೆ ನೀಡಿದ್ದು, ಈಗಾಗಲೇ ತಾಲ್ಲೂಕಿನ ಸಾವಿರಾರು ರೈತ ಜಮೀನಿನ ಮಣ್ಣು ಪರೀಕ್ಷೆಯನ್ನು ಇಲಾಖೆ ವತಿಯಿಂದ ಮಾಡಲಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶಿವಮ್ಮರಾಜಣ್ಣ ವಹಿಸಿದ್ದರು. ಗ್ರಾಮ ಪಂಚಾಯಿತಿಸದಸ್ಯರಾದಬಂಡೆಹಟ್ಟಿ ತಿಪ್ಪೇಸ್ವಾಮಿ, ದೊರೆಅಪ್ಪಣ್ಣ, ಚಿನ್ನಯ್ಯ, ಗೀತಪಾಪಣ್ಣ, ಪಿಡಿಒ ಇನಾಯಿತ್‌ಪಾಷ, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ದೊರೆಬೈಯಣ್ಣ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

### ವಾಸವಿ ಪದವಿ ಕಾಲೇಜಿನಲ್ಲಿ ವಿಶ್ವ ಏಡ್ಸ್ ದಿನಾಚರಣೆ

# ಏಡ್ಸ್ ಪೀಡಿತರಾಗಿ ಅವಮಾನದಿಂದ ಅವಸಾನವಾಗದಿರಿ

» ಚಳ್ಳಕೆರೆ




ಪ್ರತಿಯೊಬ್ಬ ವಿದ್ಯಾರ್ಥಿಯೂ ತನ್ನ ಭವಿಷ್ಯದ ಕನಸನ್ನು ನನಸು ಮಾಡಿಕೊಳ್ಳಲು ಶಿಕ್ಷಣವನ್ನು ಪಡೆಯಲು ಶಾಲಾ, ಕಾಲೇಜಿಗೆ ಬರುತ್ತಾನೆ. ಎಸ್‌ಎಸ್‌ಎಲ್‌ಸಿ, ಪಿಯುಸಿ ನಂತರ ಪದವಿ ಕಾಲೇಜಿನಲ್ಲಿ ಶಿಕ್ಷಣ ಮುಂದುವರೆಸುತ್ತಾರೆ. ಅವನ ಏಕೈಕ ಗುರಿ ಶಿಕ್ಷಣ ಪಡೆದು ಜ್ಞಾನವಂತನಾಗಿ ಸಮಾಜಕ್ಕೆ ಮಾದರಿಯಾಗಬೇಕು ಎಂದು ಅಪರ ಸಿವಿಲ್ ನ್ಯಾಯಾಧೀಶೆ ಎಚ್.ಆರ್. ಹೇಮಾ ತಿಳಿಸಿದರು.

ಅವರು, ನಗರದ ವಾಸವಿ ಪದವಿ ಕಾಲೇಜಿನಲ್ಲಿ ಆರೋಗ್ಯ ಇಲಾಖೆ ಹಾಗೂ ವಕೀಲರ ಸಂಘ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಏಡ್ಸ್ ದಿನಾಚರಣೆ ಕಾರ್ಯಕ್ರಮವನ್ನು ಗಿಡಕ್ಕೆ ನೀರು ಎರೆಯುವ ಮೂಲಕ ಚಾಲನೆ ನೀಡಿ ಮಾತನಾಡಿದರು. ಇತ್ತೀಚಿನ ದಿನಗಳಲ್ಲಿ ಏಡ್ಸ್ ರೋಗಕ್ಕೆ ತಮಗೆ ಅರಿವಿಲ್ಲದಂತೆ ತುತ್ತಾಗುವವರ ಸಂಖ್ಯೆ ಹೆಚ್ಚುತ್ತಿದೆ. ಅನೈತಿಕ ಸಂಬಂಧದಿಂದ ಏಡ್ಸ್ ರೋಗ ನಮ್ಮನ್ನು ವ್ಯಾಪಿಸುತ್ತದೆ. ಈ ರೋಗ ಭಯಾನಕವಾದರೂ ಸೂಕ್ತ ಕಾಲದಲ್ಲಿ ಚಿಕಿತ್ಸೆ ಪಡೆದರೆ ಗುಭಮುಖರಾಗಬಹುದು. ಆದರೆ, ಪ್ರತಿಯೊಬ್ಬ ವಿದ್ಯಾರ್ಥಿ ಹಾಗೂ ಸಮಾಜದ ಪ್ರತಿಯೊಬ್ಬ ವ್ಯಕ್ತಿಯೂ ಇಂತಹ ಮಾರಕ ರೋಗದಿಂದ ದೂರವಿರಬೇಕಾಗುತ್ತದೆ. ರೋಗಬಂಧ ನಂತರ ಎಲ್ಲರಿಂದಲೂ ದೋಷಣೆಗೆ ಗುರಿಯಾಗುವ ಬದಲು ನಾವೇಸ್ವಯಂ ಪ್ರೇರಣೆಯಿಂದಅನೈತಿಕಚಟುವಟಿಕೆಗಳಿಂದ ದೂರವಿರಬೇಕಾಗುತ್ತದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬ ವಿದ್ಯಾರ್ಥಿ ಚಿಂತನೆ ಮಾಡಬೇಕು ಎಂದರು.

ಸಾರ್ವಜನಿಕ ಆಸ್ಪತ್ರೆಯ ಆಡಳಿತಾಧಿಕಾರಿ ಡಾ.ಜೆ.ಡಿ.ವೆಂಕಟೇಶ್, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಎನ್. ಕಾಶಿ, ಏಡ್ಸ್ ರೋಗ ನಿಯಂತ್ರಣ ಮತ್ತು ಚಿಕಿತ್ಸೆಯ ಬಗ್ಗೆ ಸೂಕ್ತ ಮಾಹಿತಿ ನೀಡಿದರಲ್ಲದೆ, ಹದಿಹರೆಯದ ವಯಸ್ಸಿನಲ್ಲಿ ಪ್ರತಿಯೊಬ್ಬರೂ ತಮ್ಮ ಇತಿಮಿತಿಯನ್ನು ಅರಿತು ಜಾಗೃತರಾಗಿರಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಂಶುಪಾಲ ಶ್ರೀರಾಮುಲು ವಹಿಸಿದ್ದರು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಬಿ.ತಿಪ್ಪೇಸ್ವಾಮಿ, ಪ್ರಧಾನ ಕಾರ್ಯದರ್ಶಿ ಎಂ.ಸಿದ್ದರಾಜು ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ತಳಕು ಮಾರುತಿ ಹಿರಿಯ ಪ್ರಾಥಮಿಕ ಶಾಲೆ ಕಟ್ಟಡ ಉದ್ಘಾಟನಾ ಸಮಾರಂಭ

» **ಚಳ್ಳಕೆರೆ**

ತಾಲ್ಲೂಕಿನ ತಳಕು ಗ್ರಾಮದಲ್ಲಿ ವೆಂಕಣಯ್ಯ ವಿದ್ಯಾಸಂಸ್ಥೆಯ ಮಾರುತಿ ಹಿರಿಯ ಪ್ರಾಥಮಿಕ ಶಾಲೆ ನೂತನ ಕಟ್ಟಡ ಪ್ರಾರಂಭೋತ್ಸವ ಹಾಗೂ ವಸ್ತು ಪ್ರದರ್ಶನ ಕಾರ್ಯಕ್ರಮ ಡಿ.7ರ ಗುರುವಾರ ಬೆಳಗ್ಗೆ 10ಕ್ಕೆ ನಡೆಯಲಿದೆ ಎಂದು ಸಂಸ್ಥೆಯ ಕಾರ್ಯದರ್ಶಿ ಎನ್.ನೇತ್ರಾವತಿ ತಿಳಿಸಿದ್ದಾರೆ. ಅವರು ಈ ಬಗ್ಗೆ ಮಾಹಿತಿ ನೀಡಿ, ನೂತನ ಕಟ್ಟಡ ಪ್ರಾರಂಭೋತ್ಸವವನ್ನು ಚಿತ್ರದುರ್ಗ ಜಿಲ್ಲಾ ಡಿಡಿಪಿಐ ರವಿಶಂಕರರೆಡ್ಡಿ ನೆರವೇರಿಸಲಿದ್ದು, ವಸ್ತು ಪ್ರದರ್ಶನವನ್ನು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಉದ್ಘಾಟಿಸುವರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಬೈಯಣ್ಣ, ಬಳ್ಳಾರಿ ಮಕ್ಕಳ ಮತ್ತು ಮಹಿಳಾ ಕಲ್ಯಾಣ ಇಲಾಖೆ ಉಪನಿರ್ದೇಶಕ ವಿಜಯಕುಮಾರ್, ಮದಕರಿ ವಿದ್ಯಾಸಂಸ್ಥೆ ಅಧ್ಯಕ್ಷ ಎಸ್.ಸಂದೀಪ್, ನಿವೃತ್ತ ಮುಖ್ಯ ಶಿಕ್ಷಕ ಕೆ.ಸೂರನಾಯಕ, ಸರ್ಕಾರಿ ನೌಕರರ ಸಂಘದ ರಾಜ್ಯ ಸಂಘಟನಾ ಕಾರ್ಯದರ್ಶಿ ಸಿ.ಟಿ.ವೀರೇಶ್ ಮುಂತಾದವರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು.

### ಡಿ.24ರಂದು ಹನುಮಜಯಂತಿ

» **ಚಳ್ಳಕೆರೆ**

ತಾಲ್ಲೂಕಿನ ಪುರಾತನ ದೇವಸ್ಥಾನಗಳಲ್ಲಿ ಒಂದಾದ ನಾಯಕನಹಟ್ಟಿ ರಸ್ತೆಯ ಶ್ರೀಕರೇಕಲ್ ಆಂಜನೇಯಸ್ವಾಮಿ ದೇವಸ್ಥಾನದಲ್ಲಿ ಡಿ.24ರಂದು ಪ್ರತಿವರ್ಷದಂತೆ ಈ ವರ್ಷವೂ ಹನುಮ ಜಯಂತೋತ್ಸವ ಕಾರ್ಯಕ್ರಮವನ್ನು ಭಕ್ತಿ, ಶ್ರದ್ಧೆಯಿಂದ ಆಚರಿಸಲಾಗುವುದು ಎಂದು ಅರ್ಚಕ, ವೇದಬ್ರಹ್ಮ ಸಿ.ಎನ್.ನಾಗಶಯನಗೌತಮ್ ತಿಳಿಸಿದ್ದಾರೆ. ಅಂದು ಬೆಳಗಿನಿಂದಲೇ ಸುಪ್ರಭಾತದೊಂದಿಗೆ ಕಾರ್ಯಕ್ರಮ ಆರಂಭವಾಗಲಿದ್ದು, ಆಂಜನೇಯಸ್ವಾಮಿಗೆ ವಿಶೇಷ ಅಲಂಕಾರ ಹಾಗೂ ಪೂಜೆ ಕಾರ್ಯಕ್ರಮಗಳನ್ನು ನಡೆಸಲಾಗುವುದು. ಪೂಜೆಯ ನಂತರ ಆಗಮಿಸಿದ ಎಲ್ಲಾ ಭಕ್ತರಿಗೆ ಪ್ರಸಾಧ ವಿತರಣೆ ಇರುತ್ತದೆ. ಹೆಚ್ಚಿನ ಮಾಹಿತಿಗಾಗಿ ಭಕ್ತರು ದೂರವಾಣಿ ಸಂಖ್ಯೆ 94486 68444, 94489 44226 ಸಂಪರ್ಕಿಸಲು ಕೋರಿದೆ.

### ಆಯ್ಕೆ ಸಮಿತಿ ಸಭೆ

» **ದಾವಣಗೆರೆ**

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ದಿ ನಿಗಮ ಹಾಗೂ ಇದರ ವ್ಯಾಪ್ತಿಯಲ್ಲಿ ಬರುವ ವಿವಿಧ ನಿಗಮಗಳಿಂದ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಸಾಲ, ಸೌಲಭ್ಯ ಯೋಜನೆಗಳಿಗೆ ಸಂಬಂಧಿಸಿದಂತೆ ಡಿ.15 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ ಇಟ್ನಾಳ್ ಇವರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿ ಸಭೆಯನ್ನು ಆಯೋಜಿಸಲಾಗಿದೆ.ಅರ್ಜಿದಾರರು ಕಡ್ಡಾಯವಾಗಿ ತಾವುಗಳು ಸಾಲ, ಸೌಲಭ್ಯ ಕೋರಿ ಆನ್‌ಲೈನ್ ಮೂಲಕ ಸಲ್ಲಿಸಿರುವ ಅರ್ಜಿಯೊಂದಿಗೆ ಹಾಗೂಗುರುತಿನಚೀಟಿಯೊಂದಿಗೆಹಾಜರಾಗಬೇಕು ಎಂದು ನಿಗಮದ ವ್ಯವಸ್ಥಾಪಕರಾದ ಗಾಯಿತ್ರಿ ತಿಳಿಸಿದ್ದಾರೆ.

### ಬಾಲಕಾರ್ಮಿಕರು ಹಾಗೂ ಕಿಶೋರ ಕಾರ್ಮಿರ ಪತ್ತೆ

» **ದಾವಣಗೆರೆ**

ಡಿ.5 ರಂದು ಪ್ಯಾನ್ ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಆಂದೋಲನದ ಅಂಗವಾಗಿ ದಾವಣಗೆರೆ ನಗರದಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆ ಹಾಗೂ ಬಾಲ್ಯಾವಸ್ಥೆ & ಕಿಶೋರಾವಸ್ಥೆ (ನಿಷೇಧ ಮತ್ತು ನಿಯಂತ್ರಣ) ತಿದ್ದುಪಡಿ ಕಾಯ್ದೆ ಕುರಿತು ವಿವಿಧ ಅಂಗಡಿ, ಹೋಟೆಲ್, ಗ್ಯಾರೇಜ್ ಹಾಗೂ ವಾಣಿಜ್ಯ ಸಂಸ್ಥೆಗಳಿಗೆ ಭೇಟಿ ನೀಡಿ ಅಧಿಕಾರಿಗಳು ಬಾಲ ಹಾಗೂ ಕಿಶೋರಾವಸ್ಥೆ ಕಾರ್ಮಿಕರ ತಪಾಸಣೆ ನಡೆಸಿ, ತಪಾಸಣೆಯಲ್ಲಿ ಮೂವರು ಕಿಶೋರ ಕಾರ್ಮಿಕರುಅಪಾಯಕಾರಿ,ಅಪಾಯಕಾರಿಯಲ್ಲದ ಉದ್ದಿಮೆಯಲ್ಲಿ ಪತ್ತೆಯಾಗಿದ್ದು. ಪತ್ತೆಯಾದ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರನ್ನು ಕೆಲಸದಿಂದ ಬಿಡುಗಡೆಗೊಳಿಸಿ ಮಕ್ಕಳ ಕಲ್ಯಾಣ ಸಮಿತಿಗೆ ಹಾಜರುಪಡಿಸಿ ಮಾಲೀಕರ ವಿರುದ್ದ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗಿದೆ. ಹಾಗೂ ಮಾಲೀಕರಿಗೆ ಕರಪತ್ರ & ಸ್ಟಿಕ್ಕರ್ಸ್ ನೀಡಿ ಜಾಗೃತಿ ಮೂಡಿಸಿದರು. ಕಾರ್ಯಾಚರಣೆಯಲ್ಲಿ ಕಾರ್ಮಿಕ ನಿರೀಕ್ಷಕರಾದ ರಾಜಶೇಖರ ಹಿರೇಮಠ್, ರಾಜಪ್ಪ.ಟಿ, ಆರ್.ನಾಗೇಶ್ ಹಾಗೂ ಪೊಲೀಸ್ ಇಲಾಖೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

### ವಿದ್ಯುತ್ ವ್ಯತ್ಯಯ

» **ದಾವಣಗೆರೆ**

ಉಜ್ಜಿನಿ ವಿ.ವಿ ಕೇಂದ್ರದಲ್ಲಿ ಹಾಗೂ ಸೊಕ್ಕೆ ವಿ.ವಿ ಕೇಂದ್ರದಲ್ಲಿ ಬೃಹತ್ ಹಾಗೂ ತ್ರೈಮಾಸಿಕ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಡಿ.6 ರಂದು ಬೆಳಿಗ್ಗೆ 10 ರಿಂದ ಸಂಜೆ 6 ಗಂಟೆಯವರೆಗೆ ಸೊಕ್ಕೆ ವಿ.ವಿ ಕೇಂದ್ರದ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮಗಳ ಎನ್.ಜೆ.ವೈ ಮಾರ್ಗಗಳು ಮತ್ತು ನೀರಾವರಿ ಪಂಪ್ ಸೆಟ್ಟು ಮಾರ್ಗಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ತಿಳಿಸಿದೆ.

# ಅರೆಕಾಲಿಕ ಉಪನ್ಯಾಸಕರ ಮುಂದುವರೆದ ಮುಷ್ಕರ

## ತರಗತಿಗಳಲ್ಲಿ ಬೋಧನೆ ಇಲ್ಲದೆ ಡೋಲಾಯ ಸ್ಥಿತಿಯಲ್ಲಿ ವಿದ್ಯಾರ್ಥಿಗಳು-ಸರ್ಕಾರದ ಮಧ್ಯಪ್ರವೇಶಕ್ಕೆ ಎಬಿವಿಪಿ ಒತ್ತಾಯ

» **ಚಳ್ಳಕೆರೆ**



ಕಳೆದ ಹಲವಾರು ದಿನಗಳಿಂದ ಕಾಲೇಜಿನ ಅರೆಕಾಲಿಕ ಉಪನ್ಯಾಸಕರ ತರಗತಿಗಳನ್ನು ಬಹಿಷ್ಕರಿಸಿ ದೂರ ಉಳಿದಿದ್ದರಿಂದ ಕಾಲೇಜಿನಲ್ಲಿ ತರಗತಿಗಳು ನಡೆಯದೆ ಪಾಠಗಳು ಕ್ರಮಬದ್ಧವಾಗಿ ಆಗದೆ ವಿದ್ಯಾರ್ಥಿಗಳು ಸೆಮಿಸ್ಟರ್‌ನ ಪರೀಕ್ಷೆ ಹತ್ತಿರ ಇರುವುದರಿಂದ ಶಿಕ್ಷಣ ವಂಚಿತರಾಗುತ್ತಿದ್ದಾರೆ. ಇದರಿಂದ ವಿದ್ಯಾರ್ಥಿಗಳ ಭವಿಷ್ಯಕ್ಕೆ ದಕ್ಕೆಯಾಗುತ್ತಿದೆ ಎಂದು ಆರೋಪಿಸಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ನೂರಾರು ವಿದ್ಯಾರ್ಥಿಗಳು ಎಬಿವಿಪಿ ನೇತೃತ್ವದಲ್ಲಿ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು.

ಎಬಿವಿಪಿ ನಗರ ಕಾರ್ಯದರ್ಶಿ ಶ್ರೀನಿವಾಸ್ ನೇತೃತ್ವದಲ್ಲಿ ನೂರಾರು ವಿದ್ಯಾರ್ಥಿಗಳು ತಾಲ್ಲೂಕು ಕಚೇರಿ ಮುಂದೆ ಪ್ರತಿಭಟನೆ ನಡೆಸಿದ್ದು, ಸಂದರ್ಭದಲ್ಲಿ ತಹಶೀಲ್ದಾರ್ ಮನವಿ ನೀಡಿ ಮಾತನಾಡಿದ ಅವರು, ಅರೆಕಾಲಿಕ ಉಪನ್ಯಾಸಕರು ತಮ್ಮ ಬೇಡಿಕೆಗಳ ಈಡೇರಿಕೆಗೆ ಪಟ್ಟುಹಿಡಿದಿದ್ದಾರೆ. ಸರ್ಕಾರ ಈ ಬಗ್ಗೆ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಸಕಾಲದಲ್ಲಿ ಕಾಲೇಜಿನಲ್ಲಿ ಪಾಠಗಳಾಗದೆ ವಿದ್ಯಾರ್ಥಿಗಳು ಸಹ ಕಳವಳಕ್ಕೆ ಒಳಗಾಗಿದ್ದಾರೆ. ಇನ್ನೂ ಕೆಲವೇ ದಿನಗಳಲ್ಲಿ ಪರೀಕ್ಷೆಗಳು ಆರಂಭವಾಗಲಿದ್ದು ಬಹುತೇಕ ಎಲ್ಲಾ ವಿಷಯಗಳ ಅರೆಕಾಲಿಕ ಉಪನ್ಯಾಸಕರು ಗೈರಾದ್ದರಿಂದ ವಿದ್ಯಾರ್ಥಿಗಳು ಏನು ಕಲಿಯಲು ಸಾಧ್ಯವಾಗಿಲ್ಲ.

ಆದ್ದರಿಂದ ಸರ್ಕಾರ ಕೂಡಲೇ ವಿದ್ಯಾರ್ಥಿಗಳ ಸಹಾಯಕ್ಕೆ ದಾವಿಸಬೇಕಿದೆ. ಪಾಠಪ್ರವಚನ ಮುಂದುವರೆಸಲು ಸೂಕ್ತ ವ್ಯವಸ್ಥೆ ಮಾಡಬೇಕೆಂದು ಒತ್ತಾಯಿಸಿದರು.

ತಹಶೀಲ್ದಾರ್ ಪರವಾಗಿ ಮನವಿ ಸ್ವೀಕರಿಸಿದ ಶಿರಸ್ತೇದಾರ್ ಸದಾಶಿವಪ್ಪ,ತಮ್ಮ ಮನವಿಯನ್ನು ಜಿಲ್ಲಾಧಿಕಾರಿಗಳ ಮೂಲಕ ಸರ್ಕಾರಕ್ಕೆ ಇಂದೆ ಕಳಿಸಿಕೊಡುವ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಎಬಿವಿಪಿ ಭಾನುಪ್ರಕಾಶ್, ವಿನೋದ್, ದರ್ಶನ್, ಉದಯ, ಕಾರ್ತಿಕ್, ಮಹಾಲಕ್ಷ್ಮಿ, ರಕ್ಷಾ, ಹೇಮಲತಾ, ಕೀರ್ತಿನ್,, ಅಕೀಲ್, ಹೇಮಂತ, ಸುಹಾಸ್ ಮುಂತಾದವರು ಉಪಸ್ಥಿತರಿದ್ದರು.

# ರೋಟರಿ ಕ್ಲಬ್ ವತಿಯಿಂದ ವಕೀಲರ ದಿನಾಚರಣೆ ಅಂಗವಾಗಿ ವಕೀಲರಿಗೆ ಸನ್ಮಾನ

» **ಚಳ್ಳಕೆರೆ**



ವಕೀಲರ ದಿನಾಚರಣೆ ಅಂಗವಾಗಿ ನಗರದ ರೋಟರಿ ಕ್ಲಬ್ ವತಿಯಿಂದ ಸುಮಾರು ಎರಡು ದಶಕಗಳು ಹೆಚ್ಚುಕಾಲ ವಕೀಲರಾಗಿ ಸೇವೆ ಸಲ್ಲಿಸಿದ ಹಿರಿಯ ವಕೀಲರನ್ನು ರೋಟರಿ ಕ್ಲಬ್ ಸಭಾಂಗಣದಲ್ಲಿ ಸನ್ಮಾನಿಸಲಾಯಿತು.

ರೋಟರಿ ಹಿರಿಯ ಸದಸ್ಯ ಡಾ.ಕೆ.ಎಂ.ಜಯಕುಮಾರ್ ಮಾತನಾಡಿ, ರೋಟರಿ ಕ್ಲಬ್ ಹಲವಾರು ವರ್ಷಗಳಿಂದ ಆರೋಗ್ಯ ಮತ್ತು ಸಾಮಾಜಿಕ ಸೇವೆಯಲ್ಲಿ ನಿರಂತರ ತೊಡಗಿಕೊಂಡು ಜನರಿಗೆ ಹಲವಾರು ರೀತಿಯಲ್ಲಿ ಸಹಾಯ ಮಾಡುತ್ತಾ ಬಂದಿದೆ. ವಕೀಲರ ವೃತ್ತಿ ತುಂಬಾ ಘನತೆಯಿಂದ ಕೂಡಿದ್ದು, ನ್ಯಾಯಾಲಯಕ್ಕೆ ನ್ಯಾಯವನ್ನು ಬಯಸಿ ಬರುವ ಮುಗ್ದ ಕಕ್ಷಿದಾರರಿಗೆ ಸೂಕ್ತ ತಿಳುವಳಿಕೆ ನೀಡಿ ಅವರಿಗೆ ಕಾನೂನಿನ ಪರಿಮಿತಿಯಡಿ ವಕೀಲರು ನ್ಯಾಯ ದೊರಕಿಸಿಕೊಡುತ್ತಾರೆ. ವಕೀಲರ ವೃತ್ತಿ ಮೌಲ್ಯದ ಬಗ್ಗೆ ಎಲ್ಲರೂ ಹೆಮ್ಮೆ ಪಡುವಂತಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರೋಟರಿ ಅಧ್ಯಕ್ಷ ಕೆ.ನಾಗೇಶ್ ಮಾತನಾಡಿ, ನಗರದ ನ್ಯಾಯಾಲಯದಲ್ಲಿ ತಮ್ಮದೇಯಾದ ಉತ್ತಮ ಕಾರ್ಯದ ಮೂಲಕ ಕಕ್ಷಿದಾರರ ಹಿತವನ್ನು ಕಾಪಾಡುವ ಅನೇಕ ವಕೀಲರು ನಮ್ಮಲಿದ್ದಾರೆ. ಅವರ ವೃತ್ತಿಯ ಬಗ್ಗೆ ಅಪಾರವಾದ ಗೌರವವಿದೆ. ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು, ಎಂ.ವಿ.ಶಿವಾನಂದ ಮತ್ತು ಮಧುಮತಿ ಇವರನ್ನು ಕ್ಲಬ್ ವತಿಯಿಂದ ಇಂದು ಸನ್ಮಾನಿಸಲಾಗಿದೆ. ಮುಂದಿನ ದಿನಗಳಲ್ಲೂ ಸಹ ವಿವಿಧ ವೃತ್ತಿಗಳಲ್ಲಿ ಸೇವೆ ಸಲ್ಲಿಸುವವರನ್ನು ಗುರುತಿಸಿ ಗೌರವಿಸಲಾಗುವುದು ಎಂದರು.

ಎಸ್.ಜಯಪ್ರಕಾಶ್,ಡಾ.ಎಲ್.ಎಸ್.ವೀರೇಶ್, ಇನ್ನರ್ ವ್ಹೀಲ್ ಕ್ಲಬ್ ಅಧ್ಯಕ್ಷೆ ಮೀರಾರಮೇಶ್, ಡಾ.ನಾಗರಾಜು,ಕೆ.ಎಂ.ಪ್ರಕಾಶ,ಸಿ.ಎಸ್.ಪ್ರಹ್ಲಾದ್, ಕಾರ್ಯದರ್ಶಿ ಆರ್.ತಿಪ್ಪೇಸ್ವಾಮಿ, ಇನ್ನರ್ ವ್ಹೀಲ್ ಕ್ಲಬ್ ಕಾರ್ಯದರ್ಶಿ ಸುನೀತಾಗೌಡ, ರಾಜೇಶ್ವರಿ, ಮಂಗಳ, ಭೀಮಣ್ಣ ಉಪಸ್ಥಿತರಿದ್ದರು.

# ಮಾದಕ ವಸ್ತು ಮಾರಾಟ ಮಾಡದಂತೆ ಔಷಧಿ ಅಂಗಡಿ ಮಾಲೀಕರಿಗೆ ಎಚ್ಚರಿಕೆ ನೀಡಿದ ಪೊಲೀಸ್ ಇಲಾಖೆ



» **ಚಳ್ಳಕೆರೆ**

ಇತ್ತೀಚಿನ ದಿನಗಳಲ್ಲಿ ಪೊಲೀಸ್ ಇಲಾಖೆಯ ಹದ್ದಿನ ಕಣ್ಣಿನ ಕಾವಲಿನ ನಡುವೆಯೂ ಕೆಲವೊಂದು ಕಾನೂನು ಬಾಹಿರ ಚಟುವಟಿಕೆ ನಡೆಯುತ್ತಿದ್ದು, ಇದನ್ನು ನಿಯಂತ್ರಿಸುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆ ಕೆಲವೊಂದು ಕಠಿಣ ಕ್ರಮಗಳನ್ನು ಕೈಗೊಳ್ಳಬೇಕಿದೆ. ಇದಕ್ಕೆ ಎಲ್ಲರೂ ಕೈಜೋಡಿಸಬೇಕೆಂದು ಠಾಣಾ ಇನ್ಸ್‌ಪೆಕ್ಟರ್ ರಾಜಫಕೃದ್ದೀನ್ ದೇಸಾಯಿ ತಿಳಿಸಿದರು. ಅವರು, ಪೊಲೀಸ್ ಠಾಣೆಯಲ್ಲಿ ನಗರದ ಔಷಧಿ ಅಂಗಡಿ ಮಾಲೀಕರು ಮತ್ತು ವಿತರಕರು, ಬುಕ್‌ಸ್ಟಾಲ್, ಪಂಚರ್ ಅಂಗಡಿ ಮಾಲೀಕರಿಗೆ ಸಭೆಯನ್ನು ಆಯೋಜಿಸಿ ಮಾತನಾಡಿದರು. ಕಳೆದ ಕೆಲವು ತಿಂಗಳ ಹಿಂದೆ ಗಾಂಜಾ ಸೇವನೆ ಹಿನ್ನೆಲೆಯಲ್ಲಿ ಅಪ್ರಾಪ್ತ ಬಾಲಕರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಇಲ್ಲಿನ ಖಾಸಗಿ ಅಂಗಡಿಗಳಲ್ಲಿ ಕೆಲವೊಂದು ವಸ್ತುಗಳನ್ನು ಅವರು ಖರೀದಿಸುವುದು ಕಂಡುಬಂದಿದೆ. ಅದೇ ರೀತಿ ಔಷಧ ಅಂಗಡಿಗಳಲ್ಲೂ ಮತ್ತು ಬರುವ ಕೆಲವೊಂದು ಔಷಧಗಳನ್ನು ಅಪ್ರಾಪ್ತ ಬಾಲಕರು ಖರೀದಿ ಮಾಡುತ್ತಿದ್ದಾರೆ. ಇದರಿಂದ ಅವರೂ ಸಹ ಕೆಟ್ಟ ಹಾದಿಯಲ್ಲಿ ಸಾಗುವುದಲ್ಲದೆ, ಸಮಾಜದ ಶಾಂತಿಯನ್ನು ಕದಡುತ್ತಿದ್ದಾರೆ. ಆದ್ದರಿಂದ ಅಂಗಡಿ ಮಾಲೀಕರು ಎಚ್ಚರಿಕೆ ವಹಿಸುವಂತೆ ಸೂಚಿಸಿದರು. ಪಿಎಸ್‌ಐಗಳಾದ ಜೆ.ಶಿವರಾಜು, ಧರಪ್ಪಾಬಾಳಪ್ಪ ದೊಡ್ಡಮನಿ, ಔಷಧಿ ಅಂಗಡಿ ಮಾಲೀಕರಾದ ಮಂಜುನಾಥ, ಗುರು, ಬಿ.ಫರೀದ್‌ಖಾನ್, ಪ್ರಸಾದ್, ಬಾಲಾಜಿ, ಸೋಮನಾಥ, ಶಿವಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.



ಚಳ್ಳಕೆರೆ ನಗರದ ಗಾಂಧಿನಗರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ವಿಶ್ವಅಂಗವಿಕಲರ ದಿನಾಚರಣೆ ಹಿನ್ನೆಲೆಯಲ್ಲಿ ಏರ್ಪಡಿಸಿದ್ದ ಕ್ರೀಡೆ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಬಿಇಒ ಕೆ.ಎಸ್.ಸುರೇಶ್ ಉದ್ಘಾಟಿಸಿದರು.

# ಶಿವಸಾಧು ಸ್ವಾಮೀಜಿ ಸ್ಮರಣಾರ್ಥ ನೇತ್ರ ತಪಾಸಣಾ ಶಿಬಿರ

» **ಚಳ್ಳಕೆರೆ**



ತಾಲ್ಲೂಕಿನ ಕುರುಡಿಹಳ್ಳಿ ಆಶ್ರಮದ ಶಿವಸಾಧುಬಾವಾಜಿ ಸ್ವಾಮೀಜಿ ಇತ್ತೀಚೆಗಷ್ಟೇ ನಿಧನರಾಗಿದ್ದು, ಅವರ ಸಾವನ್ನು ಸಹ ಸಾರ್ಥಕಪಡಿಸುವ ನಿಟ್ಟಿನಲ್ಲಿ ಅವರ ಭಕ್ತವೃಂದ ಸ್ವಾಮೀಜಿಯವರ ಚಿರಸ್ಮರಣೆಗಾಗಿ ಡಿ.5ರ ಮಂಗಳವಾರ ಕುರುಡಿಹಳ್ಳಿಯ ನಂದಾಮಸಂದ್ ಬಾವಾಜಿ ಸೇವಾಶ್ರಮದಲ್ಲಿ ಉಚಿತ ನೇತ್ರ ತಪಾಸಣಾ ಶಿಬಿರ ಹಾಗೂ ಕಣ್ಣಿಗೆ ಸಂಬಂಧಪಟ್ಟ ಸಮಸ್ಯೆಗಳ ಬಗ್ಗೆ ತಪಾಸಣೆ ನಡೆಸಿ ಚಿಕಿತ್ಸೆ ನೀಡುವರು.

ತಾಲ್ಲೂಕು ಬಂಜಾರ ಸಮುದಾಯದ ಗೌರವಾಧ್ಯಕ್ಷ, ನಿವೃತ್ತ ಮಕ್ಕಳ ತಜ್ಞ ಡಾ.ಬಿ.ಚಂದ್ರನಾಯ್ಕ ಇಲ್ಲಿನ ಪ್ರವಾಸಿಮಂದಿರದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿ, ಶಿವಸಾಧುಬಾವಾಜಿ ಸ್ವಾಮೀಜಿ ಅನೇಕ ಸೇವಾ ಕಾರ್ಯಗಳಲ್ಲಿ ಸ್ವಯಂ ಪ್ರೇರಣೆಯಿಂದ ತೊಡಗಿಕೊಂಡವರು. ಯಾರಿಂದಲೂ ಯಾವುದೇ ರೀತಿಯ ಫಲಾಪೇಕ್ಷೆಯನ್ನು ಆಪೇಕ್ಷಿಸದೆ ತಾವೇ ಸ್ವಯಂ ಪ್ರೇರಣೆಯಿಂದ ಅನೇಕ ಸಾಮಾಜಿಕ, ಧಾರ್ಮಿಕ ಕಾರ್ಯಕ್ರಮಗಳಲ್ಲಿ ತೊಡಗಿಸಿಕೊಂಡವರು. ಈ ಹಿನ್ನೆಲೆಯಲ್ಲಿ ಅವರ ಸ್ಮಣಾರ್ಥ ಶಿಬಿರವನ್ನು ಹಮ್ಮಿಕೊಂಡಿದ್ದು, ಇದರ ಸದುಪಯೋಗವನ್ನು ಪಡೆಯಲು ಮುಂದಾಗಬೇಕು ಎಂದರು.

ಕೆಪಿಸಿಸಿ ಕುಶಲಕರ್ಮಿ ರಾಜ್ಯ ಅಧ್ಯಕ್ಷ ಆರ್.ಪ್ರಸನ್ನಕುಮಾರ್ ಮಾತನಾಡಿ, ಕುರುಡಿಹಳ್ಳಿಯ ಸ್ವಾಮೀಜಿಯವರು ಕಳೆದ ಸುಮಾರು 5 ದಶಕಗಳಿಂದ ತಮ್ಮದೇಯಾದ ಸೇವಾ ಕಾರ್ಯಗಳ ಮೂಲಕ ಜನರಲ್ಲಿ ವಿಶ್ವಾಸ ಮೂಡಿಸಿದವರು. ತಮ್ಮ ಆಶ್ರಮದಲ್ಲೇ ಜಾನುವಾರುಗಳಿಗೆ ಉಚಿತವಾಗಿ ಮೇವು ವಿತರಿಸಲು ಗೋಶಾಲೆಯಲ್ಲೇ ಪ್ರಾರಂಭಿಸಿದವರು. ಭಕ್ತರ ಸಂಕಷ್ಟಗಳಿಗೆ ಕೂಡಲೇ ಸ್ಪಂದಿಸುವ ಗುಣ ಅವರಲ್ಲಿತ್ತು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಎಸ್.ಗೋವಿಂದನಾಯ್ಕ, ಪುರುಷೋತ್ತಮನಾಯ್ಕ, ಕ್ರಾಂತಿನಾಯ್ಕ, ವೀರಭದ್ರನಾಯ್ಕ ಮುಂತಾದವರು ಉಪಸ್ಥಿತರಿದ್ದರು.

**ಪ್ರಮುಖ ಸುದ್ದಿ**

# ವಿದ್ಯಾರ್ಥಿಗಳಿಗೆ ರಕ್ತಹೀನತೆ ಪರೀಕ್ಷೆ ಯಶಸ್ವಿ: ರವೀಶ್

» **ಚಳ್ಳಕೆರೆ**



ನಗರದಸರ್ಕಾರಿಪದವಿಪೂರ್ವಕಾಲೇಜಿನ ಪ್ರಥಮ ಪಿಯುಸಿ ವಿಜ್ಞಾನ, ಕಲೆ, ವಾಣಿಜ್ಯ ವಿದ್ಯಾರ್ಥಿಗಳಿಗೆ ರಕ್ತಹೀನತೆ ಪರೀಕ್ಷೆಯನ್ನು ಕಾಲೇಜಿನ ಆವರಣದಲ್ಲಿ ಸೋಮವಾರ ನಡೆಸಲಾಗಿದ್ದು, ಎಲ್ಲಾ ವಿದ್ಯಾರ್ಥಿಗಳ ರಕ್ತಹೀನತೆಯ ಬಗ್ಗೆ ವೈದ್ಯರು ತಪಾಸಣೆ ನಡೆಸಿ ಸೂಕ್ತ ಮಾಹಿತಿ ನೀಡಿದರು ಎಂದು ಪ್ರಾಂಶುಪಾಲ ಎಂ.ರವೀಶ್ ತಿಳಿಸಿದರು.

ಅವರು, ಪತ್ರಿಕೆಗೆ ಮಾಹಿತಿ ನೀಡಿ, ಆರೋಗ್ಯ ಇಲಾಖೆಯ ಸಹಯೋಗದಲ್ಲಿ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಈ ಆರೋಗ್ಯ ಪರೀಕ್ಷೆ ಕೈಗೊಂಡು ಅವರ ಬೆಳವಣಿಗೆಯ ಬಗ್ಗೆ ವೈದ್ಯರು ಮಾರ್ಗದರ್ಶನ ನೀಡುತ್ತಾರೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ಈ ಪರೀಕ್ಷೆಗೆ ಒಳಪಡುವಂತೆ ಮಾಡಲಾಗುತ್ತದೆ. ವಿಶೇಷವಾಗಿ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನಾ ಘಟಕ ಮುಂಚೂಣಿಯಲ್ಲಿ ನಿಂತು ತಪಾಸಣೆಯಲ್ಲಿ ನೆರವಾಗಿದೆ ಎಂದು ತಿಳಿಸಿದರು.

ಡಾ.ರಮೇಶ್ ಮಾತನಾಡಿ, ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಅನಿಮಿಯಮುಕ್ತ ಪೌಷ್ಠಿಕ ಕರ್ನಾಟಕ ಯೋಜನೆಯಡಿ ಈ ಕಾರ್ಯಕ್ರಮವನ್ನು ಕಾಲೇಜಿನಲ್ಲಿ ಹಮ್ಮಿಕೊಂಡಿದೆ. ಸುಮಾರು 400ಕ್ಕೂ ಹೆಚ್ಚು ವಿದ್ಯಾರ್ಥಿಗಳ ಆರೋಗ್ಯ ಪರೀಕ್ಷೆ ಮತ್ತು ರಕ್ತಹೀನತೆಯ ಬಗ್ಗೆ ತಪಾಸಣೆ ನಡೆಸಲಾಗಿದೆ. ಎಲ್ಲಾ ವಿದ್ಯಾರ್ಥಿಗಳು ಸ್ಪೂರ್ತಿಯಿಂದ ಈ ಕಾರ್ಯದಲ್ಲಿ ಭಾಗವಹಿಸಿದ್ದು ವಿಶೇಷ ಎಂದರು.

ಎನ್‌ಎಸ್‌ಎಸ್ ಅಧಿಕಾರಿ ಬಿ.ಶಾಂತಕುಮಾರಿ ಮಾತನಾಡಿ, ಕಾಲೇಜಿನ ವಿದ್ಯಾರ್ಥಿಗಳಿಗೆ ವೈದ್ಯರ ತಂಡ ತಪಾಸಣೆ ನಡೆಸಿದ ನಂತರ ಕೆಲವೊಂದು ಸೂಕ್ತ ಮಾಹಿತಿಯನ್ನು ನೀಡಿದ್ದಾರೆ. ಪೌಷ್ಠೀಕಾಂಶ ಆಹಾರ ಸೇವನೆಯಿಂದ ಸದೃಢ ಆರೋಗ್ಯದ ಜೊತೆಗೆ ನಮ್ಮ ಜ್ಞಾನವೂ ವೃದ್ಧಿಯಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಡಾ.ಮಂಜುನಾಥ, , ಉಪನ್ಯಾಸಕ ಪುಟ್ಟರಂಗಪ್ಪ, ರವಿಕುಮಾರ್, ಮಹಂತೇಶ್, ಮಧು, ರಾಜಶೇಖರ್, ಆರೋಗ್ಯ ಇಲಾಖೆಯ ರೇಖಾ, ಅಕ್ಷತ ಮುಂತಾದವರು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T